BV
ಕನ್ನಡ ದಿನಪತ್ರಿಕೆ
12 ಏಪ್ರಿಲ್ । ಶುಕ್ರವಾರ
12 APRIL 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 46 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಬಿಎಸ್‌ವೈಗೆ ಸವಾಲ್ ಹಾಕಿದ ಶಾಸಕ ಲಕ್ಷ್ಮಣ್ ಸವದಿ



ಬೆಂಗಳೂರು: ನಿಮಗೆ ತಾಕತ್ ಇದ್ರೆ ರಾಜ್ಯದ ಮುಂದಿನ ಸಿಎಂ ಯಾರೆಂದು ಹೇಳಿ ಎಂದು ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪಗೆ ಶಾಸಕ ಲಕ್ಷ್ಮಣ್ ಸವದಿ ಸವಾಲ್ ಹಾಕಿದ್ದಾರೆ.

ಮುಂದಿನ ಪ್ರಧಾನಿ ಯಾರು ಎಂಬುದನ್ನು ಬಹಿರಂಗಪಡಿಸಿ ಎಂಬ ಬಿ.ಎಸ್ ಯಡಿಯೂರಪ್ಪ ಸವಾಲ್‌ಗೆ ಶಾಸಕ ಲಕ್ಷ್ಮಣ್ ಸವದಿ ತಿರುಗೇಟು ನೀಡಿದ್ದಾರೆ.

ಈ ವಯಸ್ಸಿನಲ್ಲಿ ಸವಾಲ್ ಹಾಕಿದ್ದೀರಾ..? ನಿಮಗೆ ತಾಕತ್ ಇದ್ರೆ ರಾಜ್ಯದ ಮುಂದಿನ ಸಿಎಂ ಯಾರೆಂದು ಹೇಳಿ..? ತಾಕತ್ ಇದ್ರೆ ಮೋದಿ ಬಳಿಕ ಪ್ರಧಾನಿ ಅಭ್ಯರ್ಥಿ ಯಾರೆಂದು ಹೇಳಿ..? ಬೇರೆ ಪಕ್ಷದವರನ್ನು ಕೇಳುವ ನೈತಿಕತೆ ನಿಮಗಿಲ್ಲ ಎಂದು ಶಾಸಕ ಲಕ್ಷ್ಮಣ್ ಸವದಿ ಹೇಳಿದ್ದಾರೆ.

## ಅಸಾಧ್ಯವನ್ನು ಸಾಧ್ಯ ಮಾಡಿದವರು ಪ್ರಧಾನಿ ನರೇಂದ್ರ ಮೋದಿಯವರು: ಬಸವರಾಜ ಬೊಮ್ಮಾಯಿ



ಹತ್ತು ವರ್ಷ ಅಧಿಕಾರ ನಡೆಸಿದರೂ ದೇಶದಲ್ಲಿ ಪ್ರಧಾನಿ ಮೋದಿ ಪರ ಅಲೆ ಇದ್ದು, ದೇಶದ ಶೇ 75% ರಷ್ಟು ಜನರು ಮೋದಿಯವರನ್ನು ಬೆಂಬಲಿಸುತ್ತಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಅವರು ಗುರುವಾರ ರೋಣ ತಾಲೂಕಿನ ಸವಡಿ, ಚಿಕ್ಕಮಣ್ಣೂರು, ಕುರಹಟ್ಟಿ ಗ್ರಾಮಗಳಲ್ಲಿ ಚುನಾವಣಾ ಪ್ರಚಾರ ನಡೆಸಿ ಮಾತನಾಡಿದರು.

ಈ ಚುನಾವಣೆ ರಾಜ್ಯಕ್ಕೆ ಸಂಬಂಧಿಸಿದ್ದಲ್ಲ. ಇಡೀ ದೇಶದ ಅಭಿವೃದ್ಧಿ ಮತ್ತು ಭವಿಷ್ಯದ ಬಗ್ಗೆ ಚಿಂತಿಸುವ ಚುನಾವಣೆ. ಮೋದಿಯವರು ಪ್ರಧಾನಿಯಾಗಿ ಹತ್ತು ವರ್ಷ ಅಧಿಕಾರ ನಡೆಸಿದ್ದಾರೆ. ಆದರೂ, ಅವರ ಪರ ಅಲೆ ಇದೆ. ಈ ದೇಶದ ಶೇ 75% ರಷ್ಟು ಜನರು ನರೇಂದ್ರ ಮೋದಿಯವರ ಪರವಾಗಿದ್ದಾರೆ. ಶೇ 25% ರಷ್ಟು ಜನರು ಅವರನ್ನು ವಿರೋಧಿಸುತ್ತಿದ್ದಾರೆ ಎಂದರು.

ಮೋದಿಯವರು ತಮ್ಮ ತಾಯಿ ತೀರಿ ಹೋದಾಗ ಕೇವಲ ಎರಡು ತಾಸಿನಲ್ಲಿ ಅವರ ಅಂತ್ಯ ಸಂಸ್ಕಾರ ಮುಗಿಸಿ ಮತ್ತೆ ದೇಶದ ಕರ್ತವ್ಯಕ್ಕೆ ಹಾಜರಾದರು. ದೇಶದ ಸಫಾಯಿ ಕರ್ಮಚಾರಿಗಳ ಪಾದಪೂಜೆ ಮಾಡಿದರು. ಇಡೀ ದೇಶದ ಜನಸಂಖ್ಯೆಯನ್ನು ಆಸ್ತಿಯನ್ನಾಗಿ ಪರಿಗಣಿಸಿ ದೇಶದ ಅಭಿವೃದ್ದಿಗೆ ಜನಸಂಖ್ಯೆ ಕಾರಣ ಅಂತ ಜಗತ್ತಿಗೆ ತೊರಿಸಿ ಕೊಟ್ಟರು. ಬಡತನ ದೊಡ್ಡ ಸಮಸ್ಯೆ ಅಂತ ಎಲ್ಲರೂ ಹೇಳುತ್ತಿದ್ದರು. ಮೋದಿಯವರು 15 ಕೋಟಿ ಜನರನ್ನು ಬಡತನ ರೇಖೆಗಿಂತ ಮೇಲೆ ತಂದರು.ದೇಶದ ಎಲ್ಲ ಮನೆಗಳಿಗೂ ಮನೆ ಮನೆಗೆ ಗಂಗೆ ಅಂತ ನಲ್ಲಿ ನೀರು ಕೊಡುತ್ತಿದ್ದಾರೆ. ಯಾವುದು ಅಸಾಧ್ಯವೊ ಅದನ್ನು ಸಾಧ್ಯ ಮಾಡುವುದೇ ಮೋದಿಯವರ ಜಾಯಮಾನ. ಜನರು ಕಷ್ಟದಲ್ಲಿದ್ದಾಗ ಸರ್ಕಾರ ಹೇಗೆ ಸ್ಪಂದಿಸುತ್ತದೆ ಎನ್ನುವುದರ ಮೇಲೆ ಸರ್ಕಾರ ಜೀವಂತ ಇದಿಯೊ ಇಲ್ಲವೊ ಎನ್ನುವುದು ತಿಳಿಯುತ್ತದೆ. ನಮ್ಮ ಅವಧಿಯಲ್ಲಿ ಪ್ರವಾಹ ಬಂದಾಗ ನಾವು ತಿಂಗಳಲ್ಲಿ 17 ಲಕ್ಷ ಜನರಿಗೆ ಎರಡು ಪಟ್ಟು ಪರಿಹಾರ ನೀಡಿದ್ದೇವು. ಕೇಂದ್ರದ ಕಡೆಗೆ ನೋಡದೆ ನಾವು ಮೊದಲು ಪರಿಹಾರ ನೀಡಿದೆವು. ಈಗಿನ ಸರ್ಕಾರ ಪರಿಹಾರ ನೀಡದೇ ಜನರಿಗೆ ಮೊಸ ಮಾಡಿದೆ ಎಂದು ವಾಗ್ದಾಳಿ ನಡೆಸಿದರು.

ಮೋದಿಯವರು ಹತ್ತು ವರ್ಷ ಅಧಿಕಾರ ಮಾಡಿದರು ಅವರ ಜನಪ್ರೀಯತೆ ಕಡಿಮೆಯಾಗಿಲ್ಲ. ಅದರೆ, ಕಾಂಗ್ರೆಸ್ ನವರಿಗೆ ಜನಪ್ರೀಯತೆ ಮುಖ್ಯವಲ್ಲ ಗಾಂಧಿ ಕುಟುಂಬದ ಕೃಪೆ ಇದ್ದರೆ ಮಾತ್ರ ಪ್ರಧಾನಿಯಾಗಲು ಸಾಧ್ಯ ಎಂದರು.

ಮೋದಿಯವರ ಅವಧಿಯಲ್ಲಿ ಭಯೋತ್ಪಾಕರಿಗೆ ತಕ್ಕ ಪಾಠ ಕಲಿಸಿದ್ದಾರೆ. ಮನಮೋಹನ್ ಸಿಂಗ್ ಅವರು ಪಾಕಿಸ್ತಾನ ಕ್ಕೆ ಪತ್ರ ಬರೆದು ನಿಮ್ಮ ಭಯೋತ್ಪಾದಕರು ನಮ್ಮ ಮೇಲೆ ದಾಳಿ ಮಾಡಿದ್ದಾರೆ. ಅವರಿಗೆ ಮಾಡಬೇಡಿ ಅಂತ ಹೇಳಲು ಕೇಳುತ್ತಿದ್ದರು. ಮೋದಿಯವರು ಅವರ ನೆಲಕ್ಕೆ ಹೋಗಿ ಅವರನ್ನು ಧ್ವಂಸ ಮಾಡಿ ಬಂದರು.

ಮೋದಿಯವರು ಕೊವಿಡ್ ಸಂದರ್ಭದಲ್ಲಿ ದೇಶದ ಎಲ್ಲರಿಗೂ ಲಸಿಕೆ ಕೊಡಿಸಿದರು. ರಷ್ಯಾ ಉಕ್ರೇನ್ ಯುದ್ದದ ಸಂದರ್ಭದಲ್ಲಿ ಎರಡು ದಿನ ಯುದ್ದ ನಿಲ್ಲಿಸಿ ನಮ್ಮ ದೇಶದ 24 ಸಾವಿರ ವಿದ್ಯಾರ್ಥಿಗಳನ್ನು ಕರೆದುಕೊಂಡು ಬಂದರು. ನಮ್ಮವರಷ್ಟೇ ಅಲ್ಲ ಪಾಕಿಸ್ತಾನದ ವಿದ್ಯಾರ್ಥಿಗಳು ಭಾರತದ ಧ್ವಜ ಹಿಡಿದು ಸುರಕ್ಷಿತವಾಗಿ ಬಂದರು.

## ಅಕ್ರಮ ಆಸ್ತಿ ಪ್ರಕರಣ: ಡಿಸಿಎಂ ಡಿಕೆ ಶಿವಕುಮಾರ್ ಗೆ ಲೋಕಾಯುಕ್ತದಿಂದ ನೋಟಿಸ್



ಬೆಂಗಳೂರು: ಲೋಕಸಭೆ ಚುನಾವಣೆ ಪ್ರಚಾರದಲ್ಲಿ ಬ್ಯುಸಿಯಾಗಿರುವ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಲೋಕಾಯುಕ್ತ ಶಾಕ್ ನೀಡಿದ್ದು, ಅಕ್ರಮ ಆಸ್ತಿ ಗಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬುಧವಾರ ನೋಟಿಸ್ ಜಾರಿ ಮಾಡಿದೆ.

ಅಕ್ರಮ ಆಸ್ತಿ ಗಳಿಕೆ ಪ್ರಕರಣದಲ್ಲಿ ಸಿಬಿಐ ತನಿಖೆಯನ್ನು ರಾಜ್ಯ ಸರ್ಕಾರ ರದ್ದು ಮಾಡಿದ್ದು, ಲೋಕಾಯುಕ್ತ ತನಿಖೆಗೆ ಆದೇಶಿಸಿತ್ತು. ಬಳಿಕ ಲೋಕಾಯುಕ್ತ ಸಂಸ್ಥೆಯಲ್ಲಿ ಡಿಕೆ ಶಿವಕುಮಾರ್ ವಿರುದ್ಧ ಎಫ್‌ಐಆರ್ ದಾಖಲಾಗಿತ್ತು. ಇದೀಗ ಪ್ರಕರಣಕ್ಕೆ ಸಂಬಂಧಿಸಿದಂತೆ ದಾಖಲೆ ಒದಗಿಸುವಂತೆ ನೊಟೀಸ್ ಜಾರಿ ಮಾಡಲಾಗಿದೆ.

ಸಿಬಿಐಗೆ ನೀಡಿರುವ ದಾಖಲೆ ಮತ್ತು ಮಾಹಿತಿಯನ್ನು ತಮಗೆ ಒದಗಿಸುವಂತೆ ಲೋಕಾಯುಕ್ತ ಪೊಲೀಸರು ಡಿಸಿಎಂ ಡಿಕೆ ಶಿವಕುಮಾರ್ ಅವರಿಗೆ ನೋಟಿಸ್ ನೀಡಿದ್ದಾರೆ.

ಅಕ್ಟೋಬರ್ 2020ರಲ್ಲಿ ಡಿಕೆಶಿ ವಿರುದ್ಧ ಸಿಬಿಐ ಆದಾಯ ಮೀರಿದ ಆಸ್ತಿಗಳಿಕೆ ಪ್ರಕರಣ ದಾಖಲಿಸಿತ್ತು. ಡಿ.ಕೆ.ಶಿವಕುಮಾರ್ ಮತ್ತು ಅವರ ಕುಟುಂಬದ ಸದಸ್ಯರು ರೂ 74.93 ಕೋಟಿ ಮೊತ್ತದ ಆಸ್ತಿಯನ್ನು ಅಕ್ರಮವಾಗಿ ಗಳಿಸಿದ್ದಾರೆ ಎಂದು ಸಿಬಿಐ ಆರೋಪಿಸಿತ್ತು.

ಮಾರ್ಚ್ 2020ರಿಂದ ಪ್ರಕರಣದ ತನಿಖೆ ನಡೆಸುತ್ತಿದ್ದ ಸಿಬಿಐ ಅಕ್ಟೋಬರ್ 5, 2020ರಲ್ಲಿ ದೆಹಲಿ, ಮುಂಬೈ ಸೇರಿದಂತೆ 14 ಸ್ಥಳಗಳಲ್ಲಿ ಏಕಕಾಲಕ್ಕೆ ದಾಳಿ ನಡೆಸಿ, ಕಂಪ್ಯೂಟರ್ ಹಾರ್ಡ್ಡಿಸ್ಕ್, 57 ಲಕ್ಷ ರೂ. ನಗದು ಸೇರಿದಂತೆ ಹಲವು ದಾಖಲೆಗಳನ್ನು ವಶಪಡಿಸಿಕೊಂಡಿತ್ತು.



## ಶಿವಮೊಗ್ಗ ಲೋಕಸಭಾ ಕ್ಷೇತ್ರದ ಪಕ್ಷೇತರ ಅಭ್ಯರ್ಥಿಯಾಗಿ ಇಂದು ಕೆ.ಎಸ್. ಈಶ್ವರಪ್ಪ ನಾಮಪತ್ರ ಸಲ್ಲಿಕೆ

ಶಿವಮೊಗ್ಗ: ಇಂದು ಶಿವಮೊಗ್ಗ ಲೋಕಸಭಾ ಕ್ಷೇತ್ರದ ಪಕ್ಷೇತರ ಅಭ್ಯರ್ಥಿಯಾಗಿ K.S ಈಶ್ವರಪ್ಪ ನಾಮಪತ್ರ ಸಲ್ಲಿಕೆ ಮಾಡಲಿದ್ದಾರೆ. ಈ ಬಗ್ಗೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ಅವರು ನಾಳೆ ಎಲ್ಲಾ ಸಮುದಾಯದವರ ಜೊತೆಗೆ ಮೆರವಣಿಗೆ ಮೂಲಕ ನಾಮಪತ್ರವನ್ನು ಸಲ್ಲಿಸುವುದಾಗಿ ಹೇಳಿದರು.

ಇನ್ನೂ ಇದೇ ವೇಳೆ ಅವರು ಮಾತನಾಡಿ, ಯಾವುದೇ ಕಾರಣಕ್ಕೂ ನಾನು ಸ್ಪರ್ಧೆಯಿಂದ ಹಿಂದೆ ಸರಿಯುವ ಮಾತಿಲ್ಲ, ನಾನು ಚುನಾವಣೆಗೆ ಸ್ಪರ್ಧೆ ಮಾಡೇ, ಮಾಡುತ್ತೇನೆ ಅಂಥ ಹೇಳಿದರು.

ಇನ್ನೂ ಹಾವೇರಿಯಿಂದ ತಮ್ಮ ಪುತ್ರ ಕಾಂತೇಶ್‌ಗೆ ಲೋಕಸಭಾ ಟಿಕೆಟ್ ಸಿಗದೇ ಇರುವುದರಿಂದ ಅವರು ಅಸಮಧಾನಗೊಂಡಿದ್ದು, ಬಹಿರಂಗವಾಗಿಯೇ ಬಿಎಸ್‌ವೈ ವಿರುದ್ದ ಮತ್ತು ಅವರ ಕುಟುಂಬ ರಾಜಕಾರಣವನ್ನು ಅವರು ಟೀಕೆ ಮಾಡುತ್ತ ಬಂದಿದ್ದಾರೆ.

## ಭಾರತಕ್ಕೆ ನೂತನ ಬ್ರಿಟಿಷ್ ರಾಯಭಾರಿಯಾಗಿ ಲಿಂಡಿ ಕ್ಯಾಮರೂನ್ ನೇಮಕ




ನವದೆಹಲಿ: ಭಾರತಕ್ಕೆ ನೂತನ ಬ್ರಿಟಿಷ್ ರಾಯಭಾರಿಯಾಗಿ ಲಿಂಡಿ ಕ್ಯಾಮರೂನ್ ಅವರನ್ನು ಯುಕೆ ನೇಮಿಸಿದೆ. ಕ್ಯಾಮರೂನ್ ಅವರು ಅಲೆಕ್ಸ್ ಎಲ್ಲಿಸ್ ಅವರ ಉತ್ತರಾಧಿಕಾ–ರಿಯಾಗಲಿದ್ದಾರೆ.

"CB OBE ಲಿಂಡಿ ಕ್ಯಾಮರೂನ್‌ಅವರು ಮತ್ತೊಂದು ರಾಜತಾಂತ್ರಿಕ ಸೇವೆಗೆ ವರ್ಗಾವಣೆಯಾಗಲಿರುವ ಅಲೆಕ್ಸ್ ಎಲ್ಲಿಸ್ ಅವರು ಭಾರತದ ಬ್ರಿಟಿಷ್ ಹೈ ಕಮಿಷನರ್ ಆಗಿ ನೇಮಕಗೊಂಡಿದ್ದಾರೆ ಎಂದು ಬ್ರಿಟಿಷ್ ರೀಡೌಟ್ ಗುರುವಾರ ತಿಳಿಸಿದೆ.

ಕ್ಯಾಮರೂನ್ ಅವರು, ಈ ತಿಂಗಳು ತಮ್ಮ ಅಧಿಕಾರವನ್ನು ಸ್ವೀಕರಿಸಲಿದ್ದಾರೆ ಎಂದು ರಾಷ್ಟ್ರ ರಾಜಧಾನಿಯಲ್ಲಿನ ಯುನೈಟೆಡ್ ಕಿಂಗ್‌ಡಂ ಹೈಕಮಿಷನ್ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ ತಿಳಿಸಲಾಗಿದೆ.

## ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದ ಹಿರಿಯ ಪತ್ರಕರ್ತ

ಬೆಂಗಳೂರು: ಲೋಕಸಭಾ ಚುನಾವಣೆ ಹೊತ್ತಿನಲ್ಲಿ ಹಿರಿಯ ಪತ್ರಕರ್ತ ದೀಪಕ್ ತಿಮ್ಮಯ್ಯ ಅವರನ್ನು ಕೆಪಿಸಿಸಿ ಅಧ್ಯಕ್ಷ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಗುರುವಾರ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡರು. ಅವರು ಪಕ್ಷವನ್ನು ಯಾಕೆ ಸೇ–ರಿದರು ಎಂಬ ಬಗ್ಗೆ ಡಿಕೆಶಿ ಮಾಹಿತಿಯನ್ನು ಹಂಚಿಕೊಂಡಿದ್ದಾರೆ.

ಸದಾಶಿವನಗರ ನಿವಾಸದಲ್ಲಿ ಗುರುವಾರ ದೀಪಕ್ ತಿ ಮ್ಮಯ್ಯಅವರಿಗೆ ಕಾಂಗ್ರೆಸ್ ಪಕ್ಷದ ಶಾಲು ಹೊದೆಸಿ, ಹೂಗುಚ್ಛ ನೀಡಿ ಪಕ್ಷಕ್ಕೆ ಬರಮಾಡಿಕೊಂಡ ಶಿವಕುಮಾರ್ ನಂತರ ಮಾಧ್ಯಮಗಳ ಜತೆ ಮಾತನಾಡಿ, ಹಿರಿಯ ಪತ್ರಕರ್ತರಾದ ದೀಪಕ್ ತಿಮ್ಮಯ್ಯ ಅವರನ್ನು ಕಾಂಗ್ರೆಸ್ ಪಕ್ಷಕ್ಕೆ ಸಂಬಂಧಿಸಿದಂತೆ ಕೆಪಿಸಿಸಿ ಅಧ್ಯಕ್ಷರ ರಾಜಕೀಯ ಹಾಗೂ ಸಂವಹನ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದ್ದು, ಅವರಿಗೆ ಕಾಂಗ್ರೆಸ್ ಕಚೇರಿಯಲ್ಲಿ ಕಚೇರಿ ನೀಡಲಾಗುವುದು.

ಪಕ್ಷದ ವಿಚಾರವಾಗಿ ಯಾರೇ ನನ್ನನ್ನು ಸಂಪರ್ಕ



ಮಾಡಲು ಅವರು ಸಹಕಾರ ನೀಡಲಿದ್ದಾರೆ ಎಂದು ಹೇಳಿದರು.

ಮಾಧ್ಯಮ ಕ್ಷೇತ್ರದಲ್ಲಿ ಸುಮಾರು 30–40 ವರ್ಷಗಳ ಅನುಭವವಿರುವ ದೀಪಕ್ ತಿಮ್ಮಯ್ಯ ಅವರು ತಮ್ಮದೇ ಆದ ಸಂಸ್ಥೆ ಮೂಲಕ ಮಕ್ಕಳನ್ನು ನಾಯಕರನ್ನಾಗಿ ರೂಪಿಸುವ ಕೆಲಸ ಮಾಡಿಕೊಂಡು ಬಂದಿದ್ದಾರೆ. ನಾಯಕರನ್ನು ಸೃಷ್ಟಿಸುವವನು ನಾಯಕನೇ ಹೊರತು ಹಿಂಬಾಲಕರನ್ನು ಸೃಷ್ಟಿಸುವವನು ಅಲ್ಲ ಎಂಬಂತೆ ಕೆಲಸ ಮಾಡುತ್ತಿದ್ದಾರೆ.

ಕಳೆದ ಕೆಲವು ವರ್ಷಗಳಿಂದ ಕಾಂಗ್ರೆಸ್ ಪಕ್ಷದ ತತ್ವ, ಸಿದ್ಧಾಂತ, ವಿಚಾರವಾಗಿ ಅವರು ನನಗೆ ಅನೇಕ ಉತ್ತಮ ಸಲಹೆಗಳನ್ನು ನೀಡಿದ್ದಾರೆ. ಹೀಗಾಗಿ ಅವರಿಗೆ ಕಾಂಗ್ರೆಸ್ ಪಕ್ಷದ ಭಾಗವಾಗುವಂತೆ ಮನವಿ ಮಾಡಿದ್ದೆ. ಅದನ್ನು ಒಪ್ಪಿ ಅವರು ಇಂದು ಪಕ್ಷಕ್ಕೆ ಸೇರ್ಪಡೆ ಆಗಿದ್ದು, ಈ ಜವಾಬ್ದಾರಿ ತೆಗೆದುಕೊಳ್ಳುತ್ತಿದ್ದಾರೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಜನರು ದಡ್ಡರಲ್ಲ, ತಮ್ಮ ಬದುಕು ಯಾರು ಕಟ್ಟಿಕೊಡುತ್ತಾರೋ ಅವರಿಗೆ ಬೆಂಬಲ ನೀಡುತ್ತಾರೆ. ಕಾಂಗ್ರೆಸ್ ಪಕ್ಷ ಜನರ ಬದುಕು ಕಟ್ಟಿಕೊಡುವ ಕೆಲಸ ಮಾಡುತ್ತಿದ್ದು, ಒಕ್ಕಲಿಗರೂ ಸೇರಿದಂತೆ ಎಲ್ಲ ವರ್ಗದ ಜನ ಕಾಂಗ್ರೆಸ್‌ಗೆ ಬೆಂಬಲ ನೀಡಲಿದ್ದಾರೆ. ಇನ್ನು ಆದಿ ಚುಂಚನಗಿರಿ ಪೀಠಾಧ್ಯಕ್ಷರಾದ ನಿರ್ಮಲಾನಂದನಾಥ ಸ್ವಾಮೀಜಿ ಹೆಸರನ್ನು ನಾನು ರಾಜಕೀಯಕ್ಕೆ ಎಳೆದು ತರುತ್ತಿಲ್ಲ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಸ್ಪಷ್ಟನೆ ನೀಡಿದರು.

## ಸೈನಿಕ ಶಾಲೆಗಳ ಖಾಸಗೀಕರಣದ ವಿರುದ್ಧ ರಾಷ್ಟ್ರಪತಿ ಮುರ್ಮುಗೆ ಮಲ್ಲಿಕಾರ್ಜುನ ಖರ್ಗೆ ಪತ್ರ



ನವದೆಹಲಿ: ಸೈನಿಕ ಶಾಲೆಗಳನ್ನು ಖಾಸಗೀಕರಣಗೊಳಿಸುವ ಕೇಂದ್ರ ಸರ್ಕಾರದ ಕ್ರಮದ ವಿರುದ್ಧ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಬುಧವಾರ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಪತ್ರ ಬರೆದಿದ್ದು, ಈ ನಿರ್ಧಾರವನ್ನು ಹಿಂಪಡೆಯಬೇಕು ಮತ್ತು ಈ ಸಂಬಂಧ ಸಹಿ ಮಾಡಲಾದ ಒಪ್ಪಂದಗಳನ್ನು ರದ್ದುಗೊಳಿಸಬೇಕು ಎಂದು ಒತ್ತಾಯಿಸಿದ್ದಾರೆ.

ದೇಶದಲ್ಲಿ 33 ಸೈನಿಕ ಶಾಲೆಗಳಿವೆ ಮತ್ತು ಅವು ರಕ್ಷಣಾ ಸಚಿವಾಲಯದ (MoD) ಅಡಿಯಲ್ಲಿ ಬರುವ ಸ್ವಾಯತ್ತ ಸಂಸ್ಥೆ ಸೈನಿಕ್ ಸ್ಕೂಲ್ಸ್ ಸೊಸೈಟಿ (SSS) ಅಡಿಯಲ್ಲಿ ಸಂಪೂರ್ಣವಾಗಿ ಸರ್ಕಾರಿ ಅನುದಾನಿತ ಸಂಸ್ಥೆಗಳಾಗಿವೆ ಎಂದು ಖರ್ಗೆ ಹೇಳಿದ್ದಾರೆ.

ರಾಷ್ಟ್ರಪತಿಗಳಿಗೆ ಬರೆದ ಎರಡು ಪುಟಗಳ ಪತ್ರದಲ್ಲಿ, ಭಾರತೀಯ ಪ್ರಜಾಪ್ರಭುತ್ವವು ಸಾಂಪ್ರದಾಯಿಕವಾಗಿ ಸಶಸ್ತ್ರ ಪಡೆಗಳನ್ನು ಯಾವುದೇ ಪಕ್ಷಪಾತದ ರಾಜಕೀಯದಿಂದ ದೂರವಿಟ್ಟಿದೆ. ಆದರೆ ಕೇಂದ್ರ ಸರ್ಕಾರವು ಈ ಸುಸಂಘಟಿತ ಸಮಾವೇಶವನ್ನು "ಮುರಿದಿದೆ" ಎಂದು ಖರ್ಗೆ ತಿಳಿಸಿದ್ದಾರೆ.

"ಹಲವು ಸರ್ಕಾರಿ ಸಂಸ್ಥೆಗಳನ್ನು ದುರ್ಬಲಗೊಳಿಸಿದ ನಂತರ, ಆರ್‌ಎಸ್‌ಎಸ್ ತನ್ನ ಸಿದ್ಧಾಂತವನ್ನು ಸಶಸ್ತ್ರ ಪಡೆಗಳ ಮೇಲೆ ಹೇರಲು ಈ ಯೋಜನೆ ರೂಪಿಸಿದೆ. ಈ ಮೂಲಕ ಅವರು ಸಶಸ್ತ್ರ ಪಡೆಗಳ ಸ್ವಭಾವ ಮತ್ತು ನೈತಿ–ಕತೆಗೆ ಹೊಡೆತ ನೀಡುತ್ತಿದ್ದಾರೆ" ಎಂದು ಖರ್ಗೆ ಆರೋಪಿಸಿದ್ದಾರೆ.

"ಈ ರೀತಿಯ ಸಂಸ್ಥೆಗಳ ಮೇಲೆ ಸಿದ್ಧಾಂತ ಹೇರಿದರೆ ಅದು ಎಲ್ಲರ ಒಳಗೊಳ್ಳುವಿಕೆಯನ್ನು ಹಾಳು ಮಾಡುತ್ತದೆ.

ಪಕ್ಷಪಾತದ ಧಾರ್ಮಿಕ/ಕಾರ್ಪೊರೇಟ್/ಕುಟುಂಬ/ಸಾಮಾಜಿಕ/ಸಾಂಸ್ಕೃತಿ–ಕ ನಡವಳಿಕೆಗಳನ್ನು ಸೈನಿಕ ಶಾಲೆಗಳ ಮೇಲೆ ಹೇರುವ ಮೂಲಕ ಆ ಶಾಲೆಗಳ ರಾಷ್ಟ್ರೀಯ ಮಾನ್ಯತೆಗೂ ಧಕ್ಕೆಯಾಗುತ್ತದೆ ಎಂದು ಖರ್ಗೆ ಹೇಳಿದ್ದಾರೆ.

ಆದ್ದರಿಂದ, ರಾಷ್ಟ್ರೀಯ ಹಿತಾಸಕ್ತಿಯಿಂದ ಈ ಖಾಸಗೀಕರಣ ನೀತಿಯನ್ನು ಸಂಪೂರ್ಣವಾಗಿ ಹಿಂಪಡೆಯಬೇಕು ಮತ್ತು ಈ ಎಂಒಯುಗಳನ್ನು ರದ್ದುಗೊಳಿಸಬೇಕು ಎಂದು ಕಾಂಗ್ರೆಸ್ ಒತ್ತಾಯಿಸುತ್ತದೆ ಎಂದು ಖರ್ಗೆ ಪತ್ರದಲ್ಲಿ ತಿಳಿಸಿದ್ದಾರೆ.

## ಮೋದಿ ಕೈ ಬಲಪಡಿಸಲು ಬಿಜೆಪಿಗೆ ಮತ ನೀಡಿ: ಮಹಾಂತೇಶ ಕವಟಗಿಮಠ

ಸತ್ತಿಗೇರಿ: 'ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಿಂದಲೇ ಭಾರತ ದೇಶವು ಸದೃಢವಾಗಿ, ಸುಭದ್ರವಾಗಿ ಅಭಿವೃದ್ಧಿ ರಾಷ್ಟ್ರವಾಗಿ, ವಿಶ್ವಗುರು ಸ್ಥಾನದತ್ತ ಧಾಪುಗಾಲಿಟ್ಟಿದೆ' ಎಂದು ಬಿಜೆಪಿ ಮುಖಂಡ ಮಹಾಂತೇಶ ಕವಟಗಿಮಠ ಹೇಳಿದರು.

ಸತ್ತಿಗೇರಿ ಗ್ರಾಮದಲ್ಲಿ ಗುರುವಾರ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್ ಪರ ಪ್ರಚಾರ ಮಾಡಿ ಮಾತನಾಡಿದ ಅವರು, 'ಮೋದಿ ಅವರ ಕೈ ಮತ್ತೊಮ್ಮೆ ಬಲಪಡಿಸಲು ಬಿಜೆಪಿಗೆ ಮತ ಹಾಕಿ' ಎಂದರು.



ಅಭ್ಯರ್ಥಿ ಜಗದೀಶ ಶೆಟ್ಟರ್ ಮಾತನಾಡಿ, 'ನರೇಂದ್ರ ಮೋದಿ ಅವರ ನಾಯಕತ್ವವನ್ನು ಇಡೀ ವಿಶ್ವವೇ ಒಪ್ಪಿಕೊಂಡಿದೆ. ಸತತ ಎರಡನೇ ಬಾರಿ ಪ್ರಧಾನಿಯಾಗಿರುವ ಅವರು ದೇಶವನ್ನು ಅಭಿವೃದ್ಧಿ ಪಥ–'ದತ್ತ ಕೊಂಡೊಯ್ಯುತ್ತಿದ್ದಾರೆ' ಎಂದರು.

'ಹಲವಾರು ಯೋಜನೆಗಳನ್ನು ಜಾರಿಗೆ ತರುವ ಮೂಲಕ ವಿಶ್ವ ನಾಯಕರಾಗಿ ಹೊರ ಹೊಮ್ಮಿದ್ದಾರೆ. ಅವರನ್ನು ಮತ್ತೊಮ್ಮೆ ಪ್ರಧಾನಿ ಮಾಡುವುದು ನಮ್ಮೆಲ್ಲರ ಕರ್ತವ್ಯ. ಜನ–ರಿಗಾಗಿ ಅವರು ತಂದಂತಹ ಯೋಜನೆಗಳನ್ನು ಮನೆ–ಮನೆಗೆ ತಲುಪಿಸಬೇಕು' ಎಂದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಅಜೀತಕುಮಾರ ದೇಸಾಯಿ, ಯಲ್ಲಮ್ಮ ದೇವಸ್ಥಾನ ಸಮಿತಿ ಅಧ್ಯಕ್ಷ ಬಸಯ್ಯ ಹಿರೇಮಠ, ಜೆಡಿಎಸ್ ಮುಖಂಡರಾದ ಪಂಚನಗೌಡ ದ್ಯಾಮನಗೌಡ್ರ, ಸೌರಭ ಚೋಪ್ರಾ, ಮೋಹನ್ ಗುರುಸ್ವಾಮಿ, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಪರ್ವತಗೌಡ ಪಾಟೀಲ, ಬಸನಗೌಡ ಪಾಟೀಲ, ಬಿಜೆಪಿ ತಾಲ್ಲೂಕು ಘಟಕದ ಅಧ್ಯಕ್ಷ ಈರಣ್ಣ ಚಂದರಗಿ, ಪಿಕೆಪಿ–ಎಸ್ ಅಧ್ಯಕ್ಷ ಮಹಾಂತೇಶ ಗೋಡಿ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಗೌಡಪ್ಪ ಸವದತ್ತಿ, ಉಪಾಧ್ಯಕ್ಷ ಗುರು ವಾಲಿ, ಜಗದೀಶ ಮೆಟಗುಡ್ಡ, ಈರಣ್ಣ ಹೊಸಮನಿ, ಮಹಾದೇವ ಯಂಡ್ರಾವಿ, ಚಂದ್ರಶೇಖರ ಸವದತ್ತಿ, ಆನಂದ ಬಾಗೋಡಿ, ನವೀನ ನಿಶಾನಿಮಠ, ಚೇತನ ಜಕಾತಿ, ರಾಜು ಸಾಲಿಮಠ ಸೇ–ರಿದಂತೆ ಅನೇಕ ಇದ್ದರು.

## ಶಾಲಾ ಬಸ್ ಪಲ್ಟಿ; 6 ಮಕ್ಕಳು ದುರ್ಮರಣ

ಶಾಲಾ ಬಸ್ ಪಲ್ಟಿಯಾಗಿ ಬಿದ್ದು 6 ಮಕ್ಕಳು ಸಾವನ್ನಪ್ಪಿರುವ ಘಟನೆ ಹರ್ಯಾಣದಲ್ಲಿ ನಡೆದಿದೆ.

ಮಹೇಂದ್ರಗಢ ಜಿಲ್ಲೆಯ ಕನಿನಾ ದಾದ್ರಿ ರಸ್ತೆಯಲ್ಲಿ ಗುರುವಾರ ಬೆಳಿಗ್ಗೆ ಈ ಅಪಘಾತ ಸಂಭವಿಸಿದೆ. ಬಸ್ ನಲ್ಲಿ 40 ವಿದ್ಯಾರ್ಥಿಗಳಿದ್ದರು. ಅಪಘಾತದಲ್ಲಿ 6 ಮಕ್ಕಳು ಸಾವನ್ನಪ್ಪಿದ್ದು, ಹಲವರು ಗಾಯಗೊಂಡಿದ್ದಾರೆ.

ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಶಾಲೆಗಳಿಗೆ ರಜೆ ಇದ್ದರೂ ಕೂಡ ಶಾಲೆಗೆ ಮಕ್ಕಳನ್ನು ಕರೆದೊಯ್ಯಲಾಗುತ್ತಿತ್ತು. ಘಟನೆ ಬಗ್ಗೆ ಪೊಲೀಸರು ತನಿಖೆ ನಡೆಸಿದ್ದಾರೆ.

## ದೇಶಕ್ಕಾಗಿ ರಕ್ತ ಹರಿಸಲು ಸಿದ್ಧ, ಆದ್ರೆ CAA ಒಪ್ಪುವುದಿಲ್ಲ: ಸಿಎಂ ಮಮತಾ ಬ್ಯಾನರ್ಜಿ



ಕೊಲ್ಕತ್ತಾ: ಪಶ್ಚಿಮ ಬಂಗಾಳದಲ್ಲಿ ಪೌರತ್ವ ತಿದ್ದುಪಡಿ ಕಾಯ್ದೆ (ಸಿಎಎ), ಏಕರೂಪ ನಾಗರಿಕ ಸಂಹಿತೆ ಕಾಯ್ದೆ (ಯುಸಿಸಿ) ಮತ್ತು ನಾಗರಿಕರ ರಾಷ್ಟ್ರೀಯ ನೋಂದಾವಣಿ (ಎನ್‌ಆರ್‌ಸಿ) ಅನುಷ್ಠಾನಕ್ಕೆ ಅವಕಾಶ ನೀಡುವುದಿಲ್ಲ ಎಂದು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಗುರುವಾರ ಹೇಳಿದ್ದಾರೆ.

ಈದ್–ಉಲ್–ಫಿತರ್ ಅಂಗವಾಗಿ ಆಯೋಜಿಸಿದ್ದ ಸಭೆಯಲ್ಲಿ ಮಾತನಾಡಿದ ಅವರು, "ನಾವು ದೇಶಕ್ಕಾಗಿ ರಕ್ತ ಹರಿಸಲು ಸಿದ್ಧರಿದ್ದೇವೆ ಆದರೆ ದೇಶಕ್ಕಾಗಿ ಚಿತ್ರಹಿಂಸೆಯನ್ನು ಸಹಿಸುವುದಿಲ್ಲ. ಏಕರೂಪ ನಾಗರಿಕ ಸಂಹಿತೆ ಸ್ವೀಕಾರಾರ್ಹವಲ್ಲ. ಎಲ್ಲಾ ಧರ್ಮಗಳ ನಡುವೆ ಸಾಮರಸ್ಯವನ್ನು ಬಯಸುತ್ತೇನೆ. ನಿಮ್ಮ ಸುರಕ್ಷತೆ, ನಿಮ್ಮ ಜೀವನ ಮುಖ್ಯವಾಗಿದೆ ಹೊರತು NRC ಇಲ್ಲ, ಅಂಂ ಇಲ್ಲ ಎಂದರು.

## ಚಿಕ್ಕೋಡಿಯಲ್ಲಿ 16 ಲಕ್ಷ ನಗದು ಸೀಜ್: ಇಬ್ಬರು ಪೊಲೀಸರು ವಶಕ್ಕೆ



ಬೆಳಗಾವಿ: ಲೋಕಸಭಾ ಚುನಾವಣೆಯ ದಿನಾಂಕ ಘೋಷಣೆಯಾದ ಬೆನ್ನಲ್ಲೇ ನೀತಿ ಸಂಹಿತೆ ಕೂಡ ಜಾರಿಯಾಗಿದೆ. ಈ ಹಿನ್ನೆಲೆಯಲ್ಲಿ ಪೊಲೀಸರು ಆಕ್ಟೀವ್ ಆಗಿದ್ದಾರೆ. ಅಂತೆಯೇ ಚಿಕ್ಕೋಡಿಯಲ್ಲಿ ಭರ್ಜರಿ ಕಾರ್ಯಾಚರಣೆ ನಡೆಸಿರುವ ಪೊಲೀಸರು, ತಡರಾತ್ರಿ ಚಿಕ್ಕೋಡಿ ಬಸ್ ನಿಲ್ದಾಣದಲ್ಲಿ ಪೊಲೀಸರ ತಪಾಸಣೆ ವೇಳೆ ಹಣ ಪತ್ತೆಯಾಗಿದೆ.ಬಸ್ ಮೂಲಕ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 16 ಲಕ್ಷ 31 ಸಾವಿರ ರೂ. ವಶಕ್ಕೆ ಪಡೆದಿದ್ದಾರೆ.

ಚಿಕ್ಕೋಡಿಯಿಂದ ಮಹಾರಾಷ್ಟ್ರದ ಇಚಲಕರಂಜಿ ನಗರಕ್ಕೆ ತೆರಳುತ್ತಿದ್ದ ಬಸ್ ತಪಾಸಣೆ ವೇಳೆ ದಾಖಲೆ ಇಲ್ಲದ ಹಣ ಪತ್ತೆಯಾಗಿದೆ. ಅಕ್ರಮ ಹಣದ ಜೊತೆಗೆ ಇಬ್ಬರನ್ನ ವಶಕ್ಕೆ ಪಡೆದು ಪೊಲೀಸರು ವಿಚಾರಣೆ ನಡೆಸಿದ್ದಾರೆ. ಹಣ ಸಾಗಾಟ ಮಾಡುವವರು ಮಹಾರಾಷ್ಟ್ರದ ಇಚಲಕರಂಜಿ ನಗರದ ನಿವಾಸಿಗಳಾಗಿದ್ದಾರೆ. ಪ್ರಕರಣವನ್ನ ಆದಾಯ ತೆ–ರಿಗೆ ಇಲಾಖೆಗೆ ಪೊಲೀಸರು ಹಸ್ತಾಂತರಿಸಿದ್ದಾರೆ. ಚಿಕ್ಕೋಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಭಾರತ–ಚೀನಾ ಗಡಿ ಪರಿಸ್ಥಿತಿಯತ್ತ ತುರ್ತಾಗಿ ಗಮನಹರಿಸಬೇಕಿದೆ: ಪ್ರಧಾನಿ ಮೋದಿ

ನವದೆಹಲಿ: ಭಾರತ–ಚೀನಾ ಗಡಿ ಪರಿಸ್ಥಿತಿಯತ್ತ ತುರ್ತಾಗಿ ಗಮನ ಹರಿಸಬೇಕಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅಚ್ಚರಿಯ ಹೇಳಿಕೆ ನೀಡಿದ್ದಾರೆ. ದ್ವಿಪಕ್ಷೀಯ ಸಂವಹನಗಳಲ್ಲಿ ಅಸಹಜತೆಗಳನ್ನು ನಿವಾರಿಸುವುದಕ್ಕಾಗಿ ಗಡಿ ಪರಿಸ್ಥಿತಿಯತ್ತ ಗಮನಹ–ರಿಸಬೇಕು ಎಂದು ಮೋದಿ ಹೇಳಿದ್ದಾರೆ.

ಉಭಯ ದೇಶಗಳು ಮುಖ್ಯವಾದ ಸಂಬಂಧಗಳನ್ನು ಹೊಂದಿವೆ ಎಂದಿರುವ ಪ್ರಧಾನಿ, ಇಡೀ ಜಗತ್ತಿಗೆ ಭಾರತ–ಚೀನಾದ ಸ್ಥಿರ ಸಂಬಂಧಗಳು ಮುಖ್ಯವಾಗಿರುತ್ತದೆ ಎಂದು ಅಮೇರಿಕಾದ ನ್ಯೂಸ್ ವೀಕ್ ನಿಯತಕಾಲಿಕೆಗೆ ನೀಡಿರುವ ಸಂದರ್ಶನದಲ್ಲಿ ಹೇಳಿದ್ದಾರೆ.

ಭಾರತಕ್ಕೆ ಚೀನಾದೊಂದಿಗಿನ ಸಂಬಂಧ ಮುಖ್ಯ



ಹಾಗೂ ಮಹತ್ವದ್ದಾಗಿದೆ. ದೀರ್ಘಾವಧಿಯಿಂದ ಇರುವ ನಮ್ಮ ಗಡಿ ಪರಿಸ್ಥಿತಿಗಳತ್ತ ತುರ್ತಾಗಿ ಗಮನಹರಿಸಬೇಕು ತನ್ಮೂಲಕ ದ್ವಿಪಕ್ಷೀಯ ಸಂಬಂಧಗಳಲ್ಲಿನ ಅಸಹಜತೆಗಳನ್ನು ನಿವಾರಿಸಬೇಕು ಎಂಬುದು ನನ್ನ ನಂಬಿಕೆಯಾಗಿದೆ ಎಂದು ಮೋದಿ ಹೇಳಿದ್ದಾರೆ.

ಸಕಾರಾತ್ಮಕ ಮಾತುಕತೆ ಮೂಲಕ ಉಭಯ ದೇಶಗಳು ತನ್ನ ಗಡಿಯಲ್ಲಿ ಶಾಂತಿಯನ್ನು ಪುನಃಸ್ಥಾಪಿಸಲು ಸಾಧ್ಯವಾಗುತ್ತದೆ ಎಂದು ಮೋದಿ ಇದೇ ವೇಳೆ ಆಶಿಸಿದ್ದಾರೆ. 2020 ರಲ್ಲಿ ಲಡಾಖ್ ನ ಗಾಲ್ವಾನ್ ಕಣಿವೆಯಲ್ಲಿ ತಮ್ಮ ಸೈನಿಕರ ನಡುವಿನ ಘರ್ಷಣೆಯ ನಂತರ ಭಾರತ–ಚೀನಾ ಸಂಬಂಧಗಳು ಹದಗೆಟ್ಟಿದೆ. ಘರ್ಷಣೆಯಲ್ಲಿ ಸುಮಾರು 20 ಭಾರತೀಯ ಸೈನಿಕರು ಕೊಲ್ಲಲ್ಪಟ್ಟರು, ಚೀನಾ ಅನಿರ್ದಿಷ್ಟ ಸಂಖ್ಯೆಯ ಸಾವುನೋವುಗಳನ್ನು ಎದುರಿಸಿತ್ತು ಈ ಬಳಿಕ ಉನ್ನತ ಮಟ್ಟದ ರಾಜತಾಂತ್ರಿಕ ಮತ್ತು ಮಿಲಿಟರಿ ಮಾತುಕತೆಗಳು ನಡೆದಿತ್ತು.

## ಕಸ್ಟಮ್ಸ್ ಅಧಿಕಾರಿ ಎಂದು ನಂಬಿಸಿ ವ್ಯಕ್ತಿಗೆ 2.24 ಕೋಟಿ ವಂಚನೆ



ಬೆಂಗಳೂರು : ಬೆಂಗಳೂ-ರಿನ ಟೆಕ್ಕಿಯೊಬ್ಬರಿಗೆ ಕಸ್ಟಮ್ಸ್ ಅಧಿಕಾರಿ ಎಂದು ಕರೆ ಮಾಡಿದ್ದ ವ್ಯಕ್ತಿ 2.24 ಕೋಟಿ ರೂ. ವಂಚಿಸಿದ್ದಾನೆ.

ನಿಮ್ಮ ಪಾರ್ಸಲ್ ದೆಹಲಿಯ ಕಸ್ಟಮ್ಸ್‌ನಲ್ಲಿ ಸೀಜ್ ಮಾಡಲಾಗಿದೆ. ಅದರಲ್ಲಿ ನಿಮ್ಮ ಹೆಸರಿನ ನಕಲಿ ಪಾಸ್ ಪೋರ್ಟ್, ಬ್ಯಾಂಕ್ ಎಟಿಎಂ ಕಾರ್ಡ್ಗಳು, ಎಂಡಿಎಂಎ ಡ್ರಗ್ಸ್ ಇದೆ ಎಂದು ಸುಳ್ಳು ಹೇಳಿದ್ದ. ಈ ವಿಚಾರ ಆ್ಯಂಟಿ ನಾರ್ಕೋಟಿಕ್ ಬ್ಯೂರೊಗೆ ತಿಳಿದಿದೆ, ಹಾಗಾಗಿ ದೂರು ದಾಖಲು ಮಾಡಬೇಕು ಎಂದು ಹೆದರಿಸಲಾಗಿದೆ.

ದೂರು ನೀಡಲು ಸ್ಕೈಪ್ ಆ್ಯಪ್ ಡೌನ್‌ಲೋಡ್ ಮಾಡಿಕೊಳ್ಳಿ ಎಂದು ಆರೋಪಿ ಸೂಚನೆ ನೀಡಿದ್ದ. ಇದನ್ನು ನಂಬಿ ಸ್ಕೈಪ್ ಆ್ಯಪ್ ಡೌನ್‌ಲೋಡ್ ಮಾಡಿದ ಟೆಕ್ಕಿ ಅದರ ಮೂಲಕ ದೂರು ನೀಡಲು ವಂಚಕ ಹೇಳಿದಂತೆಯೇ ಮಾಡಿದ್ದಾರೆ. ಸ್ಕೈಪ್ ಆ್ಯಪ್‌ನಲ್ಲಿ ವಿಡಿಯೋ ಕಾಲ್‌ನಲ್ಲಿ ಕಾಣಿಸಿಕೊಂಡ, ಪೊಲೀಸ್ ಸಮವಸ್ತ್ರದಂತೆಯೇ ಬಟ್ಟೆ ಧ-ರಿಸಿದ್ದ ವ್ಯಕ್ತಿ, ನಿಮ್ಮ ಮೇಲೆ ಮನಿ ಲಾಂಡರಿಂಗ್ ಪ್ರಕರಣ ಕೂಡ ಇದೆ. ಸಿಬಿಐನವರು ಈ ಬಗ್ಗೆ ವಿಚಾರಣೆ ಮಾಡುತ್ತಾರೆ ಎಂದು ಹೆದರಿಸಿದ್ದಾನೆ.

ಪ್ರಕರಣವನ್ನು ಮುಕ್ತಾಯಗೊಳಿಸಲು ಹಣ ನೀಡುವಂತೆ ಕೇಳಿ, ಹಂತ ಹಂತವಾಗಿ ಸುಮಾರು 8 ಖಾತೆಗೆಗಳಿಗೆ ಒಟ್ಟು 2.24 ಕೋಟಿ ರೂ. ವರ್ಗಾವಣೆ ಮಾಡಿದ್ದಾರೆ. ಕೆಲ ದಿನಗಳ ನಂತರ ಟೆಕ್ಕಿಗೆ ತಾನು ಮೋಸ ಹೋಗಿರುವುದು ಗೊತ್ತಾಗಿದೆ. ಈ ಕುರಿತು ಪೊಲೀಸ್ ದೂರು ದಾಖಲಿಸಿದ್ದಾರೆ.

## ಜಡೆ ಗ್ರಾಮದಲ್ಲಿ ಮತದಾನ ಜಾಗೃತಿ



ಶಿವಮೊಗ್ಗ: ಸ್ವೀಪ್ ಸಮಿತಿ ವತಿಯಿಂದ ಕಳೆದ ಬಾರಿ ಕಡಿಮೆ ಮತದಾನವಾದ ಜಡೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮತಗಟ್ಟೆ ಸಂಖ್ಯೆ 35 ರಲ್ಲಿ ಮನೆ ಮನೆಗೆ ಭೇಟಿ ನೀಡಿ ಮತದಾನ ಜಾಗೃತಿ ಮೂಡಿಸಲಾಯಿತು.

ಯುಗಾದಿ ಹಬ್ಬದ ಪ್ರಯುಕ್ತ ಮತದಾರರ ಹಬ್ಬ ಆಚರಿಸಿ ರಂಗೋಲಿ ಸ್ಪರ್ಧೆ ನಡೆಸಿ, ಪ್ರತಿಜ್ಞಾವಿಧಿ ಭೋದಿಸಲಾಯಿತು. ನಂತರ ಬೈಕ್ ಜಾಥಾ ಮೂಲಕ ಮತದಾನ ಜಾಗೃತಿ ಮೂಡಿಸಿ, ಮೇ 07 ರಂದು ಕಡ್ಡಾಯವಾಗಿ ಮತದಾನ ಮಾಡುವಂತೆ ಕೋರಲಾಯಿತು.

## ಮೃತನ ವಾರಸುದಾರರ ಪತ್ತೆಗೆ ಮನವಿ



ಬಳ್ಳಾರಿ:ನಗರದ ಮುಂಡ್ರಗಿ ಇಂಡಸ್ಟ್ರಿಯಲ್ ಏರಿಯಾದ 2ನೇ ಸ್ಟೇಜ್ ಬಳಿ ವಾಸವಿದ್ದು, ಅಲ್ಲಿಯೆ ಟೀ ಹೋಟಲ್ ವ್ಯಾಪಾರ ಮಾಡುತ್ತಿದ್ದ ಸಿರುಗುಪ್ಪ ಮೂಲದ ವೆಂಕಟೇಶ ಎನ್ನುವ 30 ವರ್ಷದ ವ್ಯಕ್ತಿ ಟಿಬಿ ಖಾಯಿಲೆಯಿಂದ ಬಳಲುತ್ತಿದ್ದ ಕಾರಣ ಜಿಗುಪ್ಸೆಗೊಂಡು, ಏ.07 ರಂದು ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿ ಮೃತ ಪಟ್ಟ ಪ್ರಕರಣ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದಾಖಲಾಗಿದ್ದು, ಮೃತನ ವಾರಸುದಾರ ಪತ್ತೆಗೆ ಸಹಕರಿಸಬೇಕೆಂದು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ಅಸಿಸ್ಟೆಂಟ್ ಸಬ್ ಇನ್ಸ್ಪೆಕ್ಟರ್ ಅವರು ಮನವಿ ಮಾಡಿದ್ದಾರೆ.

ಮೃತನ ಚಹರೆ ಗುರುತು ತಿಳಿದಿರುವುದಿಲ್ಲ.

ಮೃತನ ವಾರಸುದಾರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ದೂ:08392276461, ಮೊ:9480803049 ಅಥವಾ ಪೊಲೀಸ್ ಕಂಟ್ರೋಲ್ ರೂಂ ದೂ:08392258100 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಸಾಧ್ಯವೇ ಇಲ್ಲ: ಬಸವರಾಜ ಬೊಮ್ಮಾಯಿ

ಹುಬ್ಬಳ್ಳಿ: ಕೇಂದ್ರದಲ್ಲಿ ಅಧಿಕಾರಕ್ಕೆ ಬರದಿರುವ ಕಾಂಗ್ರೆಸ್ ಸುಳ್ಳು ಗ್ಯಾರೆಂಟಿಗಳ ಮೂಲಕ ಜನರಿಗೆ ಮೋಸ ಮಾಡುತ್ತಿದೆ, ಸ್ವಂತ ಬಲದಿಂದ ಅಧಿಕಾರಕ್ಕೆ ಬರಲು ಸಾಕಷ್ಟು ಸ್ಥಾನಗಳಲ್ಲಿ ಸ್ಪರ್ಧಿಸದ ಕಾಂಗ್ರೆಸ್, ಮತದಾರರನ್ನು ಮೂರ್ಖರನ್ನಾಗಿಸಿ ಅಲ್ಲೊಂದು ಇಲ್ಲೊಂದು ಸ್ಥಾನ ಗೆಲ್ಲಲು ದೊಡ್ಡ ಆಶ್ವಾಸನೆ ನೀಡುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ವಾಗ್ದಾಳಿ ನಡೆಸಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ 200 ಸ್ಥಾನಕ್ಕೆ ಸ್ಪರ್ಧಿಸಿ ಸರ್ಕಾರ ಮಾಡುತ್ತೇವೆ ಎನ್ನುತ್ತಾರೆ. ಲೋಕಸಭೆಯ ಎಲ್ಲಾ ಸ್ಥಾನಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಹಾಕಿ ಸ್ಪರ್ಧಿಸುತ್ತಿಲ್ಲ. ಹೆಚ್ಚಿನ ಸ್ಥಾನಗಳಲ್ಲಿ ಸ್ಪರ್ಧೆ ಮಾಡದೇ ಅವರು ಅಧಿಕಾರಕ್ಕೆ ಹೇಗೆ ಬರುತ್ತಾರೆ? ಎಂದು ಪ್ರಶ್ನಿಸಿದರು.



ರಾಜ್ಯ ಈಗ ಕೊಡುತ್ತಿರುವ ಗ್ಯಾರೆಂಟಿ ಗಳಗಂ-ಟಿಯಾಗಿದ್ದಾವೆ. ಗೃಹಲಕ್ಷ್ಮಿ ಯೋಜನೆ ಎಷ್ಟು ಜರಿಗೆ ತಲುಪಿದೆ.

ಬೆಂಗಳೂರು ಬಿಟ್ಟಿದೆ. ಊರುಗಳಿಗೆ ಬಂದಿಲ್ಲ. ಕೇವಲ ಪ್ರಗತಿಯಲ್ಲಿದೆ ಅಂತ ಹೇಳುತ್ತಾರೆ. ಬಹುತೇಕರಿಗೆ ಗ್ಯಾರೆಂಟಿ ತಲುಪುತ್ತಿಲ್ಲ ಎಂದು ಹೇಳಿದರು.

ಕಾಂಗ್ರೆಸ್ ನವರು ಮತ್ತೆ ಗ್ಯಾರೆಂಟಿ ಕಾರ್ಡ್ ಹಂಚಲು ಶುರು ಮಾಡಿದ್ದಾರೆ. ಹೆಣ್ಣು ಮಕ್ಕಳಿಗೆ ಒಂದು ಲಕ್ಷ ರೂ. ಕೊಡುವುದಾಗಿ ಹೇಳುತ್ತಿದ್ದಾರೆ. ಯುವಕರಿಗೆ ಒಂದು ಲಕ್ಷ ಕೊಡುತ್ತೇವೆ ಅಂತ ಹೇಳಿದ್ದಾರೆ.

543 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಸ್ಪರ್ಧಿಸಿರುವುದೇ 200 ಕ್ಷೆತ್ರಗಳಲ್ಲಿ ಲೋಕಸಭೆಯಲ್ಲಿ ಬಹುಮತಕ್ಕೆ 272 ಸ್ಥಾನ ಬೇಕು. 200 ಸ್ಥಾನದಲ್ಲಿ ಸ್ಪರ್ಧಿಸಿರುವ ಇವರು ಅಧಿಕಾರಕ್ಕೆ ಬರಲು ಸಾಧ್ಯವೇ ಇಲ್ಲ ಎಂದರು.

ರಾಜ್ಯದ ಬರ ಪರಿಸ್ಥಿತಿಗೆ ರಾಜ್ಯ ಕಾಂಗ್ರೆಸ್ ಸರ್ಕಾರವೇ ಕಾರಣವಾಗಿದ್ದು, ಕೇಂದ್ರಕ್ಕೆ ಮನವಿಯನ್ನು ಕಳುಹಿಸುವಾಗ ಕರ್ನಾಟಕದ ವಾಸ್ತವ ಸ್ಥಿತಿಯನ್ನು ಕಳಿಸಿರಲಿಲ್ಲ. ಸದ್ಯಕ್ಕೆ ಸಿಎಂ ಸಿದ್ದರಾಮಯ್ಯ ತಮ್ಮ ಸರ್ಕಾರದ ಬೊಕ್ಕಸದಿಂದ ರಾಜ್ಯದ ರೈತರಿಗೆ ಹಣವನ್ನು ಬಿಡುಗಡೆ ಮಾಡಲಿ ಎಂದರು.

ರಾಜಕೀಯ ಪ್ರೇರಿತ ದೃಷ್ಟಿಯಿಂದ ಸಿದ್ದರಾಮಯ್ಯ ಬರಪರಿಹಾರಕ್ಕಾಗಿ ಸುಪ್ರಿಂಕೋರ್ಟಿಗೆ ಹೋಗಿದ್ದಾರೆ. 15 ನೇ ಹಣಕಾಸು ಆಯೋಗದಲ್ಲಿ ಅನುದಾನ ಕಡಿಮೆ ಆಗಲು ಸಿದ್ದರಾಮಯ್ಯನವರು ಕಾರಣ. ಕೇಂದ್ರಕ್ಕೆ ಅವರು ರಾಜ್ಯದ ನೈಜ್ಯಸ್ಥಿತಿಯನ್ನ ಆಗಿನ ಸರ್ಕಾರ ಹೇಳಿಕೊಳ್ಳಲಿಲ್ಲಾ ಅದಕ್ಕೆ ಈ ಪರಿಸ್ಥಿತಿ ನಿರ್ಮಾಣವಾಗಿದೆ.

ಹಿಂದಿನ ಯುಪಿಎ ಸರ್ಕಾರ ಇದ್ದಾಗ 8–10 ತಿಂಗಳ ನಂತರ ಪರಿಹಾರ ನೀಡಿದ ಉದಾಹರಣೆಯಿದೆ. ಇವರಿಗೆ ರೈತರ ಬಗ್ಗೆ ಕಳಕಳಿ ಇಲ್ಲ . ರೈತ ವಿರೋಧಿ ಸರ್ಕಾರ ಇದಾಗಿದೆ ಎಂದರು.

## ಒಕ್ಕಲಿಗರು ಮಾತ್ರವಲ್ಲ, ಎಲ್ಲಾ ವರ್ಗದ ಜನರು ಕಾಂಗ್ರೆಸ್ ಬೆಂಬಲಿಸುತ್ತಾರೆ: ಡಿಸಿಎಂ ಡಿ.ಕೆ. ಶಿವಕುಮಾರ್

"ಜನರು ದಡ್ಡರಲ್ಲ, ತಮ್ಮ ಬದುಕು ಯಾರು ಕಟ್ಟಿಕೊಡುತ್ತಾರೋ ಅವರಿಗೆ ಬೆಂಬಲ ನೀಡುತ್ತಾರೆ. ಕಾಂಗ್ರೆಸ್ ಪಕ್ಷ ಜನರ ಬದುಕು ಕಟ್ಟಿಕೊಡುವ ಕೆಲಸ ಮಾಡುತ್ತಿದ್ದು, ಒಕ್ಕಲಿಗರೂ ಸೇರಿದಂತೆ ಎಲ್ಲಾ ವರ್ಗದ ಜನ ಕಾಂಗ್ರೆಸ್ ಗೆ ಬೆಂಬಲ ನೀಡಲಿದ್ದಾರೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಸದಾಶಿವನಗರ ನಿವಾಸದಲ್ಲಿ ಮಾಧ್ಯಮಗಳ ಜತೆ ಶಿವಕುಮಾರ್ ಅವರು ಗುರುವಾರ ಮಾತನಾಡಿದರು. ವಿಧಾನಸಭೆ ಚುನಾವಣೆ ವೇಳೆ ಶೇ.5ರಷ್ಟು ಒಕ್ಕಲಿಗ ಮತಗಳು ಕಾಂಗ್ರೆಸ್ ಕಡೆ ವಾಲಿದ್ದವು. ಈ ಬಾರಿ ಒಕ್ಕಲಿಗರು ಯಾರನ್ನು ಬೆಂಬಲಿಸಲಿದ್ದಾರೆ ಎಂದು ಕೇಳಿದ ಪ್ರಶ್ನೆಗೆ ಅವರು ಉತ್ತರಿಸಿದ್ದು ಹೀಗೆ;

"ಒಕ್ಕಲಿಗರಾಗಲಿ, ಬೇರೆ ಸಮುದಾಯದವರಾಗಲಿ ಯಾರೂ ದಡ್ಡರಲ್ಲ. ತಮಗೆ ಯಾರು ಅನುಕೂಲ ಮಾಡಿಕೊಡಲಿದ್ದಾರೆ ಹಾಗೂ ದೇಶಕ್ಕೆ ಯಾರು ಸೂಕ್ತ ಎಂದು ನೋಡುತ್ತಾರೆ. ತಮಗೆ,



ರಾಜ್ಯಕ್ಕೆ, ದೇಶಕ್ಕೆ ಯಾರು ಉತ್ತಮರು ಎಂದು ಜನ ಆಲೋಚನೆ ಮಾಡುತ್ತಾರೆ. ಜನ ಅವರ ಬದುಕು ನೋಡುತ್ತಾರೆ ಹೊರತು, ಭಾವನೆ ನೋಡುವುದಿಲ್ಲ" ಎಂದರು.

ಸರ್ಕಾರ ಬೀಳಿಸಿದವರನ್ನೇ ಸ್ವಾಮೀಜಿಗಳ ಬಳಿ ಕರೆದುಕೊಂಡು ಹೋದರೆ ಸಮಾಜ-ಕ್ಕೆ ಏನು ಉತ್ತರ ನೀಡುತ್ತಾರೆ? ಒಕ್ಕಲಿಗ ಸರ್ಕಾರ ಬೀಳಿಸಿದ ವಿಚಾರವಾಗಿ ಸ್ವಾಮೀಜಿ ಉತ್ತರ ಕೊಡಬೇಕು ಎಂಬ ಹೇಳಿಕೆ ಬಗ್ಗೆ ಚರ್ಚೆಯಾಗುತ್ತಿದೆ ಎಂದು ಕೇಳಿದಾಗ,

"ಈ ವಿಚಾರವಾಗಿ ಸ್ವಾಮೀಜಿಗಳು ಉತ್ತರ ನೀಡಬೇಕು ಎಂದು ನಾನು ಕೇಳಿಲ್ಲ. ಕುಮಾರಸ್ವಾಮಿ ಹಾಗೂ ಕೆಲವು ಮಂತ್ರಿಗಳು ಸ್ವಾಮೀಜಿಗಳ ಕಾರ್ಯಕ್ರಮಕ್ಕೆ ಹೋಗಿದ್ದರು. ಅವರು ವಾಪಸ್ ಬರುವ ವೇಳೆಗೆ ಆಪರೇಷನ್ ಕಮಲ ನಡೆದಿತ್ತು. ಸ್ವಾಮೀ-ಜಿಗಳಿಗೂ ಒಕ್ಕಲಿಗ ವ್ಯಕ್ತಿ ಸಿಎಂ ಆಗಿರುವ ಬಗ್ಗೆ ಅಭಿಮಾನ ಇರುತ್ತದೆ. ಆದರೆ ಈಗ ಒಕ್ಕಲಿಗ ಸಿಎಂಅನ್ನು ತೆಗೆದವರನ್ನೇ ಜತೆಗೆ ಕರೆದುಕೊಂಡು ಹೋದರೆ ಹೇಗೆ? ಸ್ವಾಮೀ-ಜಿಗಳ ಆಶೀರ್ವಾದ ಎಲ್ಲರಿಗೂ ಬೇಕು. ಹೀಗಾಗಿ ಚೆಲುವರಾಯಸ್ವಾಮಿ ಅವರು ನಮ್ಮ ಅಭ್ಯರ್ಥಿಗಳನ್ನು ಕರೆದುಕೊಂಡು ಹೋಗಿದ್ದರು. ಅದೇ ರೀತಿ ಇವರು ಕೂಡ ಆಶೀರ್ವಾದ ಪಡೆಯಲು ಹೋಗಿದ್ದಾರೆ. ಕುಮಾರಸ್ವಾಮಿ, ಮಂಜುನಾಥ್ ಅವರು ಸ್ವಾಮೀಜಿಗಳ ಆಶೀರ್ವಾದ ಕೇಳಿದ್ದರಲ್ಲಿ ತಪ್ಪೇನಿಲ್ಲ. ಆದರೆ ಸರ್ಕಾರ ತೆಗೆದವರನ್ನೇ ಜತೆಯಲ್ಲಿ ಕರೆದುಕೊಂಡು ಹೋಗಿದ್ದಾರೆ. ಇದರಿಂದ ಅವರು ಸಮಾಜಕ್ಕೆ ಏನು ಉತ್ತರ ನೀಡುತ್ತಾರೆ ಎಂದಷ್ಟೇ ನಾನು ಕೇಳಿದೆ" ಎಂದು ತಿಳಿಸಿದರು.

## ಎಲ್ಲ ಪತಂಜಲಿ ಉತ್ಪನ್ನಗಳ ಗುಣಮಟ್ಟ ಪರಿಶೀಲನೆಗೆ ಆರೋಗ್ಯ ಸಚಿವರ ಆದೇಶ

ಬೆಂಗಳೂರು: ಪತಂಜಲಿ ಆಯುರ್ವೇದದ ಜಾಹೀರಾತುಗಳ ಕು-ರಿತು ಸೂಕ್ತ ಕ್ರಮ ಕೈಗೊಳ್ಳುವಲ್ಲಿ ವಿಫಲವಾದ ಉತ್ತರಾಖಂಡದ ಔಷದ ಪರವಾನಗಿ ಮತ್ತು ನಿಯಂತ್ರಣ ಪ್ರಾಧಿಕಾರವನ್ನು ಸುಪ್ರೀಕೋರ್ಟ್ ತರಾಟೆಗೆ ತೆಗೆದುಕೊಂಡ ಬೆನ್ನಲ್ಲೇ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಅವರು ರಾಜ್ಯದಲ್ಲಿ ಎಲ್ಲ ಪತಂಜಲಿ ಉತ್ಪನ್ನಗಳ ಗುಣಮಟ್ಟ ಪರಿಶೀಲನೆಗೆ ಆದೇಶಿಸಿದ್ದಾರೆ.

ಈ ಕುರಿತು ಟ್ವೀಟ್ ಮಾಡಿರುವ ಅವರು, ರಾಜ್ಯದಲ್ಲಿ ಪತಂಜಲಿ ಆಯುರ್ವೇದ ಲಿಮಿಟೆಡ್‌ನಿಂದ



ಬರುವ ಎಲ್ಲ ಉತ್ಪನ್ನಗಳ ಗುಣಮಟ್ಟ ಪರಿಶೀಲನೆ ನಡೆಸಲಾಗುತ್ತದೆ. ಎಲ್ಲ ಪತಂಜಲಿ ಉತ್ಪನ್ನಗಳ ಗುಣಮಟ್ಟ ಪರೀಕ್ಷಿಸಲು ಔಷದ ನಿಯಂತ್ರಣ ಇಲಾಖೆ ಮತ್ತು ಆಯುಷ್ ಆಯುಕ್ತರಿಗೆ ಸೂಚನೆ ನೀಡಲಾಗಿದೆ ಎಂದಿದ್ದಾರೆ.

ಪತಂಜಲಿ ಆಯುರ್ವೇದದ ಜಾಹೀರಾತುಗಳ ಕುರಿತು ಸೂಕ್ತ ಕ್ರಮ ಕೈಗೊಳ್ಳುವಲ್ಲಿ ವಿಫಲವಾಗಿರುವ ಉತ್ತರಾಖಂಡದ ಔಷದ ಪರವಾನಗಿ ಮತ್ತು ನಿಯಂತ್ರಣ ಪ್ರಾಧಿಕಾರವನ್ನು ಸುಪ್ರೀ ಕೋರ್ಟ್ ತರಾಟೆಗೆ ತೆಗೆದುಕೊಂಡಿದ್ದು, ಈ ವಿಷಯವನ್ನು ಯಾವುದೇ ಕಾರಣಕ್ಕೂ ಲಘುವಾಗಿ ತೆಗೆದುಕೊಳ್ಳುವಂತಿಲ್ಲ ಎಂದಿದೆ. ಇದಾದ ಬಳಿಕ ದಿನೇಶ್ ಗುಂಡೂರಾವ್ ಈ ಕ್ರಮ ಕೈಗೊಂಡಿದ್ದಾರೆ.

ಬಾಬಾ ರಾಮದೇವ್ ಅವರು ಆಯುರ್ವೇದ ಮತ್ತು ಭಾರತೀಯ ವೈದ್ಯ ಪದ್ಧತಿಗೆ ಅಪಖ್ಯಾತಿ ತಂದಿದ್ದಾರೆ. ಆರೋಗ್ಯ, ವ್ಯಾಪಾರ ಅಥವಾ ರಾಜಕೀಯದಲ್ಲಿ ನಿಮಗೆ ಕುರುಡು ನಂಬಿಕೆ ಇದ್ದಾಗ ಹೀಗಾಗುತ್ತದೆ ಎಂದು ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ದಾರಿ ತಪ್ಪಿಸುವಂತಹ ಜಾಹೀರಾತುಗಳನ್ನು ಪ್ರಕಟಿಸಿದ್ದಕ್ಕೆ ಸಂಬಂಧಿಸಿದಂತೆ ಯೋಗಗುರು ಬಾಬಾ ರಾಮದೇವ್ ಹಾಗೂ ಪತಂಜಲಿ ಆಯುರ್ವೇದದ ವ್ಯವಸ್ಥಾಪಕ ನಿರ್ದೇಶಕ ಆಚಾ-ರ್ಯ ಬಾಲಕೃಷ್ಣ ಅವರು ಬೇಷರತ್ತಾಗಿ ಕ್ಷಮೆ ಕೋರಿ ಸಲ್ಲಿಸಿದ ಪ್ರಮಾಣಪತ್ರಗಳನ್ನು ಒಪ್ಪಿಕೊಳ್ಳಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ.

## ಅಪಾಯಕಾರಿ ಶ್ವಾನ ಸಾಕಾಣಿಕೆ ನಿಷೇಧ ಕಾನೂನಿಗೆ ವಿರುದ್ಧ: ಕೇಂದ್ರದ ಆದೇಶ ರದ್ದುಗೊಳಿಸಿದ ಹೈಕೋರ್ಟ್



ಬೆಂಗಳೂರು: ಕೇಂದ್ರ ಸರ್ಕಾರದ ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ಸಚಿವಾಲಯ ಅಪಾಯಕಾರಿ ಶ್ವಾನಗಳ ಸಾಕಾಣಿಕೆ ನಿಷೇಧಿಸಿ ಮಾರ್ಚ್ 12, 2024 ರಂದು ಹೊರಡಿಸಿದ್ದ ವಿವಾದಾತ್ಮಕ ಸುತ್ತೋಲೆಯನ್ನು ಕರ್ನಾಟಕ ಹೈಕೋರ್ಟ್ ಬುಧವಾರ ರದ್ದುಗೊಳಿಸಿದೆ.

ಮನುಷ್ಯರ ಜೀವಕ್ಕೆ ಅಪಾಯಕಾರಿ ಎನ್ನಲಾಗಿರುವ 23ಕ್ಕೂ ಹೆಚ್ಚು ಶ್ವಾನ ತಳಿಗಳ ಮಾರಾಟ, ಸಾಕಾಣಿಕೆ ಹಾಗೂ ಅವುಗಳ ಸಂತಾನೋತ್ಪತ್ತಿಗೆ ನಿಷೇಧ ಹೇರಿ ಕೇಂದ್ರ ಸರ್ಕಾರ ಸುತ್ತೋಲೆ ಹೊರಡಿಸಿತ್ತು.

ಈ ಸುತ್ತೋಲೆಯು ಕಾನೂನಿಗೆ ವಿರುದ್ಧವಾಗಿದೆ ಹಾಗಾಗಿ ಅದನ್ನು ರದ್ದುಗೊಳಿಸಬೇಕು ಎಂದು ಹೈಕೋರ್ಟ್ ಹೇಳಿದೆ. ಅಲ್ಲದೆ ಈ ಕ್ರಮಕ್ಕೆ ಮುನ್ನ ಶ್ವಾನ ತಳಿ ಸಂವರ್ಧನಾ ಸಂಘಟನೆಯೊಂದಿಗೆ ಸಮಾಲೋಚಿಸಬೇಕು. ಸರ್ಕಾರ ಶ್ವಾನ ತಳಿ ನಿಷೇಧಿಸುವ ಮುನ್ನ ಕಾನೂನಿನ ಕ್ರಮ ಅನುಸರಿಸಬೇಕು ಎಂದು ಹೇಳಿದೆ.

ಕೇಂದ್ರದ ಸುತ್ತೋಲೆಯನ್ನು ಪ್ರಶ್ನಿಸಿ ಬೆಂಗಳೂರಿನ ನಿವಾಸಿಗಳಾದ ಕಿಂಗ್ ಸೊಲೊಮನ್ ಡೇವಿಡ್ ಮತ್ತು ಮರಡೋನಾ ಜೋನ್ಸ್ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಪೀಠ, ಕೇಂದ್ರದ ಆದೇಶಕ್ಕೆ ಮಧ್ಯಂತರ ತಡೆ ನೀಡಿತ್ತು. ಏಪ್ರಿಲ್ 6ರಂದು ಇದೇ ಮಧ್ಯಂತರ ಆದೇಶವನ್ನು ಹೈಕೋರ್ಟ್ ಮುಂದುವರಿಸಿತ್ತು. ಇಂದು ಕೇಂದ್ರ ಹೊರಡಿಸಿದ್ದ ಸುತ್ತೋಲೆಯನ್ನು ರದ್ದುಗೊಳಿಸಿ ತೀಪು ನೀಡಿದೆ.

**ಸುತ್ತೋಲೆ ಮೂಲಕ ಕೇಂದ್ರ ನಿಷೇಧಿಸಿದ್ದ ಶ್ವಾನಗಳ ಪಟ್ಟಿ ಹೀಗಿದೆ**

ಪಿಟ್‌ಬುಲ್ ಟೆರಿಯರ್, ಟೋಸಾ ಇನು, ಅಮೇರಿಕನ್ ಸ್ಟಾಫರ್ಡ್‌ಶೈರ್ ಟೆರಿಯರ್, ಫಿಲಾ ಬ್ರೆಸಿಲಿರೊ, ಡೋಗೊ ಅರ್ಜೆಂಟಿನೋ, ಅಮೇ-ರಿಕನ್ ಬುಲ್‌ಡಾಗ್, ಬೋರ್‌ಬೋಲ್, ಕಂಗಲ್, ಸೆಂಟ್ರಲ್ ಏಷ್ಯನ್ ಶೆಫರ್ಡ್ ಡಾಗ್, ಕಕೇಶಿಯನ್ ಶೆಫರ್ಡ್ ಡಾಗ್, ಸೌತ್ ರಷ್ಯನ್ ಶೆಫರ್ಡ್ ಡಾಗ್, ಟೋರ್ನ್‌ಜಾಕ್, ಸರ್ಪ್ಲಾನಿನಾಕ್, ಜಪಾನೀಸ್ ಟೋಸಾ, ಅಕಿಟಾಟ್, ಮಾ ಟೆರಿಯರ್‌ಗಳು, ರೊಡೇಸಿಯನ್ ರಿಡ್ಜ್‌ಬ್ಯಾಕ್, ವುಲ್ಫ್ ಡಾಗ್ಸ್, ಕೆನಾರಿಯೊ, ಅಕ್ಬಾಶ್ ಡಾಗ್, ಮಾಸ್ಕೋ ಗಾರ್ಡ್ ಡಾಗ್, ಕೇನ್ ಕೊರ್ಸೊ.

## 2023–24: ಭಾರತದಲ್ಲಿ iPhone ಉತ್ಪಾದನೆ ಮತ್ತಷ್ಟು ಹೆಚ್ಚಳ; ಚೀನಾ ದೂರವಿಡಲು ಯುಎಸ್ ತಂತ್ರ



ನವದೆಹಲಿ: ದೇಶೀಯ ಮೊಬೈಲ್ ತಯಾರಿಕೆ ಕ್ಷೇತ್ರಕ್ಕೆ ಸಂಬಂಧಿಸಿದ ಮಹತ್ವದ ಬೆಳವಣಿಗೆಯಲ್ಲಿ ಅಮೇರಿಕಾದ ಟೆಕ್ ದೈತ್ಯ ಸಂಸ್ಥೆ ಆಪಲ್ 2023–24ನೇ ಸಾಲಿನಲ್ಲಿ ತನ್ನ ಶೇ.14 ರಷ್ಟು ಮೊಬೈಲ್ ಫೋನ್ ಗಳನ್ನು ಭಾರತದಲ್ಲಿ ಜೋಡಣೆ ಮಾಡಿದೆ.

14 ಬಿಲಿಯನ್ ಡಾಲರ್ ನಷ್ಟು ಮೌಲ್ಯದ ಮೊಬೈಲ್ ಗಳ ಜೋಡಣೆ 2023–24 ರಲ್ಲಿ ಭಾರತದಲ್ಲಿ ನಡೆದಿದ್ದು, ಇದು ಆಪಲ್ ನ ಜಾಗತಿಕ ಐಫೋನ್ ಉತ್ಪಾದನೆಯ ಶೇ.14ರಷ್ಟಾಗಿದೆ. ಅಂದರೆ ಈಗ ಆಪಲ್ ನ ಪ್ರತಿ 7 ಮೊಬೈಲ್ ಗಳಲ್ಲಿ ಒಂದನ್ನು ಭಾರತದಲ್ಲಿ ತಯರಿಸಲಾಗುತ್ತಿದೆ.

ಅಮೇರಿಕಾ–ಚೀನಾ ನಡುವಿನ ಜಿಯೋಪೊಲಿಟಿಕಲ್ ಚೀನಾದಿಂದ ತನ್ನ ಉತ್ಪಾದನಾ ನೆಲೆಗಳನ್ನು ಬೇರೆಡೆಗೆ ವರ್ಗಾವಣೆ ಮಾಡುವುದರೆಡೆಗಿನ ಸಂಸ್ಥೆಯ ಕಾರ್ಯತಂತ್ರವನ್ನು ಈ ಬೆಳವಣಿಗೆ ತೋರುತ್ತಿದೆ. 2025 ರ ವೇಳೆಗೆ ಆಪಲ್ ಸಂಸ್ಥೆ ತನ್ನ ಒಟ್ಟು ಐಫೋನ್ ಉತ್ಪಾದನೆಯ ಶೇ.25ನ್ನು ಭಾರತದಲ್ಲಿ ಪ್ರಾರಂಭಿಸಲಿದೆ ಎಂದು ಕಳೆದ ವರ್ಷ ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಉಲ್ಲೇಖಿಸಿದ್ದರು. ಆಪಲ್ ಕಂಪನಿ 2017 ರಲ್ಲಿ ಭಾರತದಲ್ಲಿ ಐಫೋನ್‌ಗಳನ್ನು ತಯಾ-ರಿಸಲು ಪ್ರಾರಂಭಿಸಿತು ಮತ್ತು ನಂತರ ಉತ್ಪಾದನೆಯನ್ನು ಹೆಚ್ಚಿಸಿದೆ. ಪ್ರಸ್ತುತ, ಆಪಲ್ ದೇಶದಲ್ಲಿ ಲೆಗಸಿ 12 ರಿಂದ ತನ್ನ ಇತ್ತೀಚಿನ ೨ಕ-೨೦ಟಿಜ 15 ವರೆಗೆ ಐಫೋನ್‌ಗಳನ್ನು ಜೋಡಣೆ ಮಾಡುತ್ತಿದೆ, ಆದರೆ ಹೆಚ್ಚಿನ-ಸ್ಪೆಕ್ ಪ್ರೊ ಮತ್ತು ಪ್ರೊ ಮ್ಯಾಕ್ಸ್ ಮಾದರಿಗಳನ್ನು ಜೋಡಣೆ/ ತಯಾರಿ ಮಾಡುತ್ತಿಲ್ಲ.

# ಬಳ್ಳಾರಿ ಲೋಕಸಭೆ ಸಾರ್ವತ್ರಿಕ ಚುನಾವಣೆ; ಅಖಂಡ ಜಿಲ್ಲೆಯಲ್ಲಿ ಒಟ್ಟು 18,77,751 ಮತದಾರರು, 1972 ಮತಗಟ್ಟೆ ಸ್ಥಾಪನೆ: ಡಿಸಿ ಮಿಶ್ರಾ ಮಾಹಿತಿ

ಬಳ್ಳಾರಿ: ಬಳ್ಳಾರಿ (ಪ.ಪಂ) ಲೋಕಸಭೆ ಮೀಸಲು ಕ್ಷೇತ್ರದಲ್ಲಿ 2024 ರ ಏಪ್ರಿಲ್ 04 ರ ಮತದಾರರ ಪಟ್ಟಿಯನ್ವಯ ಒಟ್ಟು 18,77,751 ಮತದಾರರಿದ್ದಾರೆ.

ಒಟ್ಟು 1972 ಮತಗಟ್ಟೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

**ಅಖಂಡ ಬಳ್ಳಾರಿ ಲೋಕಸಭಾ ಕ್ಷೇತ್ರ:**

09-ಬಳ್ಳಾರಿ (ಪ.ಪಂ) ಲೋಕಸಭಾ ಕ್ಷೇತ್ರವು ಹೂವಿನ ಹಡಗಲಿ, ಹಗ-ರಿಬೊಮ್ಮನಹಳ್ಳಿ, ವಿಜಯನಗರ, ಕಂಪ್ಲಿ, ಬಳ್ಳಾರಿ ಗ್ರಾಮೀಣ, ಬಳ್ಳಾರಿ ನಗರ, ಸಂಡೂರು ಹಾಗೂ ಕೂಡ್ಲಿಗಿ ಸೇ-ರಿದಂತೆ ಒಟ್ಟು ಎಂಟು ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿದ್ದು, ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ವಿಧಾನಸಭಾ ಕ್ಷೇತ್ರವು ಮಾತ್ರ ಕೊಪ್ಪಳ ಲೋಕಸಭಾ ಕ್ಷೇತ್ರ ವ್ಯಾಪ್ತಿಗೆ ಸೇರಿದೆ.

ಅಖಂಡ (ವಿಜಯನಗರ ಜಿಲ್ಲೆ ಸೇರಿ) ಜಿಲ್ಲೆಯಲ್ಲಿ 9,51,522 ಮಹಿಳಾ ಮತದಾರರೇ ಹೆಚ್ಚಿದ್ದು, 9,25,961 ಪುರುಷ ಮತದಾರರು ಹಾಗೂ 268 ಜನ ಲಿಂಗತ್ವ ಅಲ್ಪಸಂಖ್ಯಾತ ಮತದಾರರಿದ್ದಾರೆ. ಇದರಲ್ಲಿ 53,169 ಯುವ ಮತದಾರರು, 24,841 ವಿಶೇಷಚೇತನ ಮತದಾರರು ಮತ್ತು 13,285 ಜನ 85 ವರ್ಷ ಮೇಲ್ಪಟ್ಟ ವಯಸ್ಕ ಮತದಾರರಿದ್ದಾರೆ ಎಂದು ಹೇಳಿದ್ದಾರೆ.

**ಬಳ್ಳಾರಿ ಜಿಲ್ಲೆ ಕ್ಷೇತ್ರವಾರು ಮತದಾರರ ವಿವರ:**

**ಕಂಪ್ಲಿ ಕ್ಷೇತ್ರ:**

91-ಕಂಪ್ಲಿ ವಿಧಾನಸಭಾ ಕ್ಷೇತ್ರದಲ್ಲಿ 1,10,119 ಪುರುಷ ಮತದಾರರು, 1,13,006 ಮಹಿಳಾ ಮತದಾರರು ಹಾಗೂ 35 ಜನ ಲಿಂಗತ್ವ ಅಲ್ಪಸಂಖ್ಯಾತ



ಮತದಾರರು ಸೇರಿ ಒಟ್ಟು 2,23,160 ಮತದಾರರಿದ್ದಾರೆ.

ಅದರಲ್ಲಿ 7011 ಯುವ ಮತದಾರರು, 1158 ಜನ 85 ವರ್ಷ ಮೇಲ್ಪಟ್ಟ ವಯಸ್ಕ ಮತದಾರರು, 4,317 ವಿಶೇಷ ಚೇತನ ಮತದಾರರು ಮತದಾರರಿದ್ದಾರೆ. ಈ ಕ್ಷೇತ್ರದಲ್ಲಿ ಒಟ್ಟು 242 ಮತಗಟ್ಟೆಗಳಿವೆ.

**ಬಳ್ಳಾರಿ ಗ್ರಾಮೀಣ ಕ್ಷೇತ್ರ:**

93-ಬಳ್ಳಾರಿ ಗ್ರಾಮೀಣ ವಿಧಾನಸಭಾ ಕೇತ್ರದಲ್ಲಿ 1,20,964 ಪುರುಷ ಮತದಾರರು, 1,28,388 ಮಹಿಳೆ ಮತದಾರರು ಹಾಗೂ 51 ಜನ ಇತರೆ ಮತದಾರರಿದ್ದು, ಒಟ್ಟು 2,49,403 ಮತದಾರರಿದ್ದಾರೆ.

ಅದರಲ್ಲಿ 7,907 ಯುವ ಮತದಾರರು, 1,720 ಜನ 80 ವರ್ಷ ಮೇಲ್ಪಟ್ಟ ವಯಸ್ಕ ಮತದಾರರು, 2,995 ವಿಶೇಷಚೇತನ ಮತದಾರರು ಮತದಾರಿದ್ದಾರೆ. ಇಲ್ಲಿ ಒಟ್ಟು 235 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ.

**ಬಳ್ಳಾರಿ ನಗರ ಕ್ಷೇತ್ರ:**

94-ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದಲ್ಲಿ 1,31,405 ಪುರುಷ ಮತದಾರರು, 1,40,211 ಮಹಿಳೆ ಮತದಾರರು ಮತ್ತು 34 ಲಿಂಗತ್ವ ಅಲ್ಪ ಸಂಖ್ಯಾತ ಮತದಾರರು ಸೇರಿ ಒಟ್ಟು 2,71,650 ಮತದಾರರಿದ್ದಾರೆ.

ಅದರಲ್ಲಿ 7924 ಯುವ ಮತದಾರರು, 2420 ಜನ 80 ವರ್ಷ ಮೇಲ್ಪಟ್ಟ ವಯಸ್ಕ ಮತದಾರರು, 1530 ವಿಶೇಷ ಚೇತನ ಮತದಾರರಿದ್ದಾರೆ. ನಗರದಲ್ಲಿ ಒಟ್ಟು 261 ಮತಗಟ್ಟೆಗಳಿವೆ.

**ಸಂಡೂರು ಕ್ಷೇತ್ರ:**

95-ಸಂಡೂರು ವಿಧಾನಸಭಾ ಕ್ಷೇತ್ರದಲ್ಲಿ 1,15,638 ಪುರುಷ ಮತದಾರರು, 1,15,977 ಮಹಿಳೆ ಮತದಾರರು ಮತ್ತು ಇತರೆ 25 ಜನ ಲಿಂಗತ್ವ ಅಲ್ಪಸಂಖ್ಯಾತ ಮತದಾರರು ಒಳಗೊಂಡು ಒಟ್ಟು 2,31,640 ಮತದಾರರಿದ್ದಾರೆ.


ಈ ಪೈಕಿ 7,355 ಯುವ ಮತದಾರರು, 1,355 ಜನ ವಯಸ್ಕ ಮತದಾರರು, 2,742 ವಿಶೇಷಚೇತನ ಮತದಾರರಿದ್ದಾರೆ. ಈ ಕ್ಷೇತ್ರದಲ್ಲಿ ಒಟ್ಟು 253 ಮತಗಟ್ಟೆಗಳಿವೆ ಎಂದು ಜಿಲ್ಲಾ ಚುನಾವಣಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# ದೇಶದಲ್ಲಿ ತಾಪಮಾನ ಹೆಚ್ಚಳ: ಬಿಸಿಲ ಶಾಖದಿಂದ ತಪ್ಪಿಸಿಕೊಳ್ಳಲು ನಾಲ್ಕು ಪ್ರಮುಖ ಅಂಶಗಳ ಮಾರ್ಗಸೂಚಿ ಪ್ರಕಟ

2024 ಚಳಿಗಾಲದ ನಂತರ ಬಿಸಿಗಾಳಿಯು ಈಗ ಸುಡುವ ಶಾಖದೊಂದಿಗೆ ಪ್ರಾರಂಭವಾಗಿದೆ. ದೇಹದಲ್ಲಿ ನೀರಿನ ಕೊರತೆಯಿಂದಾಗಿ ಹೆಚ್ಚಿನ ಜನರು ಅನೇಕ ರೋಗಗಳಿಗೆ ತುತ್ತಾಗುತ್ತಿದ್ದಾರೆ. ಈ ವಿಪರೀತ ಶಾಖ ಮತ್ತು ಶಾಖದ ಅಲೆಯಿಂದ ನಿಮ್ಮನ್ನು ನೀವು ಹೇಗೆ ರಕ್ಷಿಸಿಕೊಳ್ಳಬೇಕು ಎಂಬುದಕ್ಕೆ ಆರೋಗ್ಯ ಸಚಿವಾಲಯ ಮಾರ್ಗಸೂಚಿ ಪ್ರಕಟಿಸಿದೆ.

ಬೇಸಿಗೆ ಬಂತೆಂದರೆ ಹೊರಗೆ ಬಿಸಿಲಿನ ಬೇಗೆ ದಿನದಿಂದ ದಿನಕ್ಕೆ ಅಸಹನೀಯವಾಗುತ್ತಿದೆ. ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಏಪ್ರಿಲ್ ಮತ್ತು ಜೂನ್ ನಡುವೆ ಹಲವಾರು ರಾಜ್ಯಗಳಲ್ಲಿ ರಣ ಬಿಸಿಲಿನ ಎಚ್ಚರಿಕೆ ನೀಡಿದೆ. ಇದರರ್ಥ ಬೇಸಿಗೆ ಸ್ನೇಹಿಯಾಗಿ ಮಾಡಲು ನಿಮ್ಮ ಆಹಾರ ಮತ್ತು ಒಟ್ಟಾರೆ ಜೀವನಶೈಲಿಯನ್ನು ಪುನರ್ನಿರ್ಮಿಸುವ ಸಮಯ. ಈ ನಿಟ್ಟಿನಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ಕೆಲವು ಆಹಾರ-ಸಂಬಂಧಿತ ಮುನ್ನೆಚ್ಚರಿಕೆಗಳ ಕುರಿತಂತೆ ಮಾಹಿತಿ ಹಂಚಿಕೊಂಡಿದೆ.

ಆರೋಗ್ಯ ಸಚಿವಾಲಯವು ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್ ಫಿನಲ್ಲಿ ಪೋಸ್ಟ್ ಮಾಡಿದೆ. "ಹೈಡ್ರೇಟೆಡ್ ಆಗಿರಿ, ಲಘು ಆಹಾರ ಸೇವಿಸಿ ಮತ್ತು ನಿಮ್ಮ ಊಟವನ್ನು ಆನಂದಿಸುತ್ತಿರುವಾಗ ಬೇಸಿಗೆಯ ಶಾಖವನ್ನು ಸೋಲಿಸಲು ಸ್ಮಾರ್ಟ್ ಆಯ್ಕೆಗಳನ್ನು ಮಾಡಿ ಎಂದು ವಿಡಿಯೋವನ್ನು ಹಂಚಿಕೊಂಡಿದೆ.



**ಬೇಸಿಗೆಯಲ್ಲಿ 4 ಆಹಾರ-ಸಂಬಂಧಿತ ಮುನ್ನೆಚ್ಚರಿಕೆ ಕ್ರಮಗಳು ಇಲ್ಲಿವೆ:**

**1. ಮಧ್ಯಾಹ್ನ ಅಡುಗೆ ಮಾಡುವುದನ್ನು ತಪ್ಪಿಸಿ:**

ಮಧ್ಯಾಹ್ನದ ಶಾಖ ಮತ್ತು ಸುಡುವ ಅನಿಲವು ಅಡುಗೆಮನೆಯ ತಾಪಮಾನವನ್ನು ಹೆಚ್ಚಿಸುತ್ತದೆ. ಇದು ಸಾಮಾನ್ಯಕ್ಕಿಂತ ಹೆಚ್ಚಾಗಿರುತ್ತದೆ. ಆದ್ದರಿಂದ, ದೇಹದ ಉಷ್ಣತೆ ಮತ್ತು ಸಂಬಂಧಿತ ಆರೋಗ್ಯ ಸಮಸ್ಯೆಗಳನ್ನು ಹೆಚ್ಚಿಸುವ ಅಪಾಯಗಳನ್ನು ತಡೆಯಲು ದಿನದ ಪೀಕ್ ಅವರ್‌ಗಳಲ್ಲಿ, ವಿಶೇಷವಾಗಿ ಮಧ್ಯಾಹ್ನದ ಸಮಯದಲ್ಲಿ ಅಡುಗೆ ಮಾಡುವುದನ್ನು ತಪ್ಪಿಸಲು ಸರ್ಕಾರ ಸಲಹೆ ನೀಡುತ್ತದೆ.

**2. ಅಡುಗೆ ಮನೆಯನ್ನು ತಂಪಾಗಿಡಿ:**

ಅಡುಗೆ ಮಾಡುವಾಗ ಹೊಗೆ, ಉಗಿ ಮತ್ತು ವಾಸನೆಯನ್ನು ಉತ್ಪಾದಿಸುತ್ತದೆ. ಅದು ನಮ್ಮ ಚರ್ಮ ಮತ್ತು ಕಣ್ಣುಗಳನ್ನು ಮತ್ತಷ್ಟು ಕೆರಳಿಸುತ್ತದೆ. ಈ ಅಂಶಗಳು ಹೆಚ್ಚಾಗಿ ಉಸಿರಾಟದ ತೊಂದರೆಗಳನ್ನು ಉಂಟುಮಾಡುತ್ತವೆ. ಆದ್ದರಿಂದ, ಅಡುಗೆ ಮನೆಯ ತಂಪಾಗಿಡಲು ಕಿಟಕಿಗಳು ಮತ್ತು ಬಾಗಿಲುಗಳನ್ನು ತೆರೆಯಲು ಸರ್ಕಾರ ಸಲಹೆ ನೀಡುತ್ತದೆ.

**3. ಹೆಚ್ಚಿನ ಪ್ರೋಟೀನ್ ಆಹಾರವನ್ನು ತಪ್ಪಿಸಿ:**

ಬೇಸಿಗೆಯಲ್ಲಿ ಅತಿಯಾದ ಶಾಖದಿಂದಾಗಿ ದೇಹವು ಬಹಳಷ್ಟು ನೀರನ್ನು ಕಳೆದುಕೊಳ್ಳುತ್ತದೆ. ಪ್ರೋಟೀನ್ ಅನ್ನು ಜೀರ್ಣಿಸಿಕೊಳ್ಳಲು ನಮ್ಮ ದೇಹಕ್ಕೆ ಹೆಚ್ಚುವರಿ ನೀರು ಬೇಕಾಗುತ್ತದೆ. ನೀರಿನ ಕೊರತೆಯು ಸಾಮಾನ್ಯವಾಗಿ ನಿರ್ಜಲೀಕರಣ ಮತ್ತು ಸಂಬಂಧಿತ ಆರೋಗ್ಯ ತೊಂದರೆಗಳಿಗೆ ಕಾರಣವಾಗುತ್ತದೆ. ಆದ್ದರಿಂದ, ನಿಮ್ಮ ಕರುಳನ್ನು ತಂಪಾಗಿ ಮತ್ತು ಆರೋಗ್ಯಕರವಾಗಿಡಲು ಹೆಚ್ಚಿನ ಪ್ರೋಟೀನ್ ಆಹಾರವನ್ನು ತ್ಯಜಿಸಲು ಸಲಹೆ ನೀಡಿದೆ.

**4. ಕೆಫೀನ್ ಮತ್ತು ಕಾರ್ಬೊನೇಟೆಡ್ ಪಾನೀಯಗಳನ್ನು ತಪ್ಪಿಸಿ:**

ಚಹಾ ಮತ್ತು ಕಾಫಿ, ಕಾರ್ಬೊನೇಟೆಡ್ ಪಾನೀಯಗಳು ಮತ್ತು ಸಕ್ಕರೆ ಪಾನೀಯಗಳಂತಹ ಕೆಫೀನ್‌ಗಳು ಪ್ರಕೃತಿಯಲ್ಲಿ ಮೂತ್ರವರ್ಧಕಗಳಾಗಿವೆ. ಇದು ನಿರ್ಜಲೀಕರಣದ ಅಪಾಯವನ್ನು ಹೆಚ್ಚಿಸುತ್ತದೆ. ಆದ್ದರಿಂದ, ದೇಹದಿಂದ ಹೆಚ್ಚುವರಿ ದ್ರವದ ನಷ್ಟವನ್ನು ತಪ್ಪಿಸಲು ಈ ಪಾನೀಯಗಳ ಸೇವನೆಯನ್ನು ಮಿತಿಗೊಳಿಸಲು ತಜ್ಞರು ಸಲಹೆ ನೀಡುತ್ತಾರೆ.

## ರಥೋತ್ಸವದ ವೇಳೆ ಅವಘಡ: 13 ವಿದ್ಯಾರ್ಥಿಗಳಿಗೆ ತಗುಲಿದ ಕರೆಂಟ್ ಶಾಕ್

ಯುಗಾದಿ ಹಬ್ಬ ತೆಲಗು ಕ್ಯಾಲೆಂಡರ್ ನಲ್ಲಿ ಹೊಸ ವರ್ಷದ ಆರಂಭವನ್ನು ಸೂಚಿಸುತ್ತದೆ. ಇದನ್ನು ಚೈತ್ರ ನವರಾತ್ರಿಯ ಮೊದಲ ದಿನದಂದು ತೆಲಂಗಾಣ, ಆಂಧ್ರಪ್ರದೇಶ ಮತ್ತು ಕರ್ನಾಟಕದ ಜನರು ಆಚರಿಸುತ್ತಾರೆ. ಆದರೆ ಹೊಸ ವರ್ಷದ ಆರಂಭದ ಸಂಭ್ರಮಾಚರಣೆ ಮಾಡುತ್ತಿದ್ದವರಿಗೆ ಶಾಕ್ ಎದುರಾಗಿದೆ.

ಯುಗಾದಿ ದಿನದಂದು ದೊಡ್ಡ ದುರಂತ ಸ್ವಲ್ಪ ಅಂತರದಿಂದ ಮಿಸ್ ಆಗಿದೆ. ರಥೋತ್ಸವದ ವೇಳೆ ವಿದ್ಯುತ್ ಅವಘಡ ಸಂಭವಿಸಿದ್ದು, 13 ವಿದ್ಯಾರ್ಥಿಗಳು ಗಾಯಗೊಂಡಿದ್ದು, ಸದ್ಯ ಯಾವುದೇ ಪ್ರಾಣ ಹಾನಿ ಸಂಭವಿಸಿಲ್ಲ ಎಂದು ತಿಳಿದು ಬಂದಿದೆ.

ಯುಗಾದಿ ರಥೋತ್ಸವದ ವೇಳೆ 13 ವಿದ್ಯಾರ್ಥಿಗಳು ವಿದ್ಯುತ್ ಸ್ಪರ್ಶದಿಂದ ಗಾಯಗೊಂಡಿದ್ದು, ಕೂಡಲೇ ಆಸ್ಪತ್ರೆಗೆ ದಾಖಲಿಸಲಾಗಿದೆ.

ಮೆರವಣಿಗೆ ಭಾಗವಾದ ರಥವು ಹೈವೋಲ್ಟೇಜ್ ವಿದ್ಯುತ್ ತಂತಿಗೆ ತಗುಲಿ ಕನಿಷ್ಠ 13 ಮಕ್ಕಳು ಗಾಯಗೊಂಡಿದ್ದಾರೆ. ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ತೇಕೂರ್ ಗ್ರಾಮದಲ್ಲಿ ಈ ಘಟನೆ ನಡೆದಿದೆ.

## ನಿಪ್ಪಾಣಿ ಕ್ಷೇತ್ರದಲ್ಲೇ ಸಾಹುಕಾರ್ ಸುತ್ತಾಟ: ಜೊಲ್ಲೆಗೆ ಪೀಕಲಾಟ್

ನಿಪ್ಪಾಣಿ: ಚಿಕ್ಕೋಡಿ ಲೋಕಸಭಾ ಕ್ಷೇತ್ರದಿಂದ ಪುತ್ರಿಯನ್ನು ಕಣಕ್ಕಿಳಿಸಿದ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಈಗಾಗಲೇ ಆತ್ಮೀಯ ವಲಯದಲ್ಲಿ ವ್ಯಾಪಕ ಬೆಂಬಲ ವ್ಯಕ್ತವಾಗಿದ್ದು, ಬಿಜೆಪಿ ಭದ್ರಕೋಟೆಯಲ್ಲಿ ಕೈ ಮೆಲುಗೈ ಸಾಧಿಸಲು ಪಣ ತೊಟ್ಟಿರುವ ಸತೀಶ್ ಜಾರಕಿಹೊಳಿ ಅವರು ಪ್ರಭಾವಿ ನಾಯಕರ ಮನೆ-ಮನೆಗೆ ಭೇಟಿ ನೀಡಿ ಸಂಚಲನ ಸೃಷ್ಟಿಸಿದ್ದಾರೆ.

ಪ್ರಚಾರ ಸಭೆ ಬಳಿಕ ಸಚಿವರು ಬುಧವಾರ ನಿಪ್ಪಾಣಿ ವ್ಯಾಪ್ತಿಯ ಹಲವು ಮುಖಂಡರ ಮನೆಗೆ ಭೇಟಿ ನೀಡಿ, ರಾಜಕೀಯ ಬೆಳವಣಿಗೆಗಳ ಕುರಿತು ಚರ್ಚೆ ನಡೆಸಿದರು. ಪುತ್ರಿ ಪ್ರಿಯಂಕಾ ಅವರನ್ನು ಬಹು ಅಂತರದಿಂದ



ಗೆಲ್ಲಿಸಬೇಕೆಂದು ಮನವಿ ಮಾಡಿದರು.

ಜಾರಕಿಹೊಳಿ ಕುಡಿಗಳಿಂದ ಭರ್ಜರಿ ಪ್ರಚಾರ: ಜೊಲ್ಲೆಯವರ ತವರು ಕ್ಷೇತ್ರದಲ್ಲಿ ಸುತ್ತಾಟ ನಡೆಸಿದ ಸಾಹುಕಾರ್ ಸತೀಶ ಅವರು ಅಬ್ಬರದ ಪ್ರಚಾರ ಕೈಗೊಂಡಿದ್ದಾರೆ. ಸಚಿವ ಸತೀಶ್ ಜಾರಕಿಹೊಳಿ ಅಭಿಮಾನ ಬಳಗ ಜತೆಗೆ ಯುವ ನಾಯಕಿ ಎಂಬ ಆತ್ಮೀಭಿಮಾನ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಪ್ಲಸ್ ಆಗಲಿದೆ. ಚಿಕ್ಕೋಡಿ ಲೋಕಸಭಾ ಕ್ಷೇತ್ರ ಜಾರಕಿಹೊಳಿ ಕುಡಿಗಳು ಭರ್ಜರಿ ಪ್ರಚಾರ ನಡೆಸಿದ್ದು ವ್ಯಾಪಕ ಬೆಂಬಲ ವ್ಯಕ್ತವಾಗುತ್ತಿದೆ. ಇದರಿಂದ ಕಾಂಗ್ರೆಸ್ ಅಭ್ಯರ್ಥಿಗೆ ಇನ್ನಷ್ಟು ಬಲ ಬಂದತಾಗಿದೆ.

ನಿಪ್ಪಾಣಿ ಪಟ್ಟಣದ ಮುಖಂಡರಾದ ರಾಕೇಶ್ ಕದಂ, ಅಶೋಕಕುಮಾರ ಅಸೋದೆ, ನಗರಸಭೆ ಸದಸ್ಯ ರವಿ ಶಿಂಧೆ, ಮಾಜಿ ಶಾಸಕ ಸುಭಾಷ್ ಜೋಶಿ, ಪ್ರೊ. ಅಚ್ಯುತ್ ಮಾನೆ, ಶಹಾ ಉದ್ಯಮ ಸಮೂಹದ ಅಧ್ಯಕ್ಷ ಆಶೀಶ್ ಶಹಾ ಅವರ ಮನೆಗಳಿಗೆ ಭೇಟಿ ನೀಡಿ ಕುಶಲೋಪರಿ ವಿಚಾರಿಸಿ, ರಾಜಕೀಯ ಬೆಳವಣಿಗಳ ಬಗ್ಗೆಯೂ ಚರ್ಚೆ ನಡೆಸಿದ್ದು, ಈ ಭಾಗದಿಂದ ಹೆಚ್ಚಿನ ಮತಗಳು ಕೈ ಗೆ ಶಕ್ತಿ ಬರಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ.

ಸಮಸ್ಯೆ ಆಲಿಸಿದ ಸಚಿವರು: ಈಗಾಗಲೇ ನಿಪ್ಪಾಣಿ ವ್ಯಾಪ್ತಿಯ ಪ್ರತಿ ವಾರ್ಡ್ ನ ನಿವಾಸಿಗಳಿಗೆ ಭೇಟಿಯಾದ ಸಚಿವ ಸತೀಶ್ ಜಾರಕಿಹೊಳಿ ಅವರು ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ, ಕುಡಿಯುವ ನೀರು ಸೇರಿದಂತೆ ಇತರೆ ಸಮಸ್ಯೆಗಳನ್ನು ಶೀಘ್ರದಲ್ಲೇ ಇತ್ಯರ್ಥ ಮಾಡುವುದಾಗಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ, ಬೆಳಗಾವಿ ಬೂಡಾ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ, ಮುಖಂಡರಾದ ಉತ್ತಮ ಪಾಟೀಲ, ಪಂಕಜ್ ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಲೋಕಸಭೆ ಚುನಾವಣೆ |ಶೆಟ್ಟರ್ ಗೆಲುವಿಗೆ ಜೆಡಿಎಸ್-ಬಿಜೆಪಿ ಶ್ರಮ: ಶಿವಣ್ಣ ಅಂಗಡಿ

ರಾಮದುರ್ಗ: ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಹೊಂದಾಣಿಕೆ ಮಾಡಿ ಕೊಂಡಿದ್ದರಿಂದ ಬೆಳಗಾವಿ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್ ಅವರಿಗೆ ಬೆಂಬಲ ನೀಡಿ ಅವರ ಗೆಲುವಿಗೆ ಶ್ರಮಿಸುವುದಾಗಿ ಜೆಡಿಎಸ್ ತಾಲ್ಲೂಕು ಘಟಕದ ಅಧ್ಯಕ್ಷ ಶಿವಣ್ಣ ಅಂಗಡಿ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾಜಿ ಪ್ರಧಾನಿ ದೇವೇಗೌಡರ ಹಾಗೂ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರು ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಯೊಂದಿಗೆ ಹೊಂದಾಣಿಕೆ ಮಾಡಿಕೊಂಡಿದ್ದಾರೆ. ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್ ಅವರ ಗೆಲುವಿಗೆ ಶ್ರಮಿಸುವುದಾಗಿ ತಿಳಿಸಿದರು.

ಬಿಜೆಪಿ ಮಂಡಲ ಅಧ್ಯಕ್ಷ ರಾಜೇಶ ಬೀಳಗಿ ಮಾತನಾಡಿ, 'ಕಳೆದ ಹತ್ತು ವರ್ಷದ ಅವಧಿಯಲ್ಲಿ ಪ್ರಧಾನಿ ಮೋದಿ ಅವರು ವಿಶ್ವವೇ ಭಾರತದ ಕಡೆಗೆ ನೋಡುವಂತೆ ದೇಶದ ಅಭಿವೃದ್ಧಿ ಮಾಡಿದ್ದಾರೆ. ಪ್ರಸಕ್ತ ಲೋಕಸಭೆ ಚುನಾವಣೆಯಲ್ಲಿ ಮತೊಮ್ಮೆ ಪ್ರಧಾನಿಯಾಗಿ ಆಯ್ಕೆ ಮಾಡಲು ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ತಾಲ್ಲೂಕಿನಲ್ಲಿ ಒಗ್ಗೂಡಿ ಶ್ರಮಿಸಬೇಕು' ಎಂದರು.

## ಬೆಳಗಾವಿಯಲ್ಲಿ ಸಂಭ್ರಮದ ರಂಜಾನ್ ಆಚರಣೆ



ಬೆಳಗಾವಿ: ಕುಂದಾನಗರಿಯಲ್ಲಿ ಪವಿತ್ರ ರಂಜಾನ್ ಹಬ್ಬದ ಅಂಗವಾಗಿ ನಗರದ ಈದ್ಗಾ ಮೈದಾನದಲ್ಲಿ ಗುರುವಾರ ಸಾವಿರಾರು ಮುಸ್ಲಿಂ ಬಾಂಧವರು ಶ್ರದ್ಧಾ-ಭಕ್ತಿಯಿಂದ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

ಬೆಳಗಾವಿ ಜಿಲ್ಲಾದ್ಯಂತ ಮುಸ್ಲಿಂ ಬಾಂಧವರು ಪವಿತ್ರ ಈದ್-ಉಲ್- ಫಿತರ್ ನ್ನು ಅದ್ದೂರಿಯಾಗಿ ಆಚರಿಸಿದರು.

ರಂಜಾನ್ ದಿನವಾದ ಗುರುವಾರ ಬೆಳಗಿನಿಂದಲೇ ಮುಸ್ಲಿಂ ಬಾಂಧವದವರು ಶುಭ್ರ ಬಟ್ಟೆ ತೊಟ್ಟು ಮಸೀದಿಗಳಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ನಗರದ ಜಿಲ್ಲಾಧಿಕಾರಿ ಕಚೇರಿ ಸನಿಹದ ಈದ್ಗಾದಲ್ಲಿ ಸಹಸ್ರಾರು ಜನ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಬಡವ, ಶ್ರೀಮಂತ ಉನ್ನತ, ಕನಿಷ್ಟ ಎಂಬ ಬೇಧಬಾವ ಮರೆತು ಎಲ್ಲರೂ ಪರಸ್ಪರ ತಬ್ಬಿಕೊಂಡು ಶುಭಾಶಯ ಕೋರಿಕೊಂಡರು. ಚಿಕ್ಕ ಮಕ್ಕಳು ಹೊಸ ಬಟ್ಟೆ ಧರಿಸಿ ರಂಜಾನ ಹಬ್ಬದಲ್ಲಿ ಮಿಂಚಿದ್ದರು .

ಮುಸ್ಲಿಂ ಧರ್ಮ ಗುರು ಮುಫ್ತಿ ಜೋಹೆರ್ ಸಾಮೂಹಿಕ ಪ್ರಾರ್ಥನೆ ನಡೆಸಿಕೊಟ್ಟರು, ಹಫೀಜ್ ಅಬ್ದುಲ್ ರಜಾಕ್ ಮೋಮಿನ್ ನಮಾಜ್ ಪಠಣ ಮಾಡಿದ್ದರು , ನೈಮ್ ಖತೀಬ್ ಖುತ್ಬಾ ಅಲ್ಲಾನ ಬಗ್ಗೆ ಭೋದಿಸಿದ್ದರು .

ಈ ವೇಳೆ ಮುಸ್ಲಿಂ ಧರ್ಮ ಗುರು ಮುಫ್ತಿ ಜೋಹೆರ್ ಸಮಾಜದಲ್ಲಿ ಎಲ್ಲರೊಂದಿಗೆ ಭಾವೈಕ್ಯದಿಂದ ಬಾಳಬೇಕು. ಈ ತಿಂಗಳಲ್ಲಷ್ಟೇ ಇಸ್ಲಾಂ ಆಚರಣೆಗಳನ್ನು ಪಾಲಿಸಿದರೆ ಸಾಲದು; ವರ್ಷದುದ್ದಕ್ಕೂ ಅವುಗಳನ್ನು ಪಾಲಿಸಿ, ಸರ್ವಶಕ್ತ 'ಅಲ್ಲಾಹು' ದೇವರ ಕೃಪೆಗೆ ಪಾತ್ರರಾಗಬೇಕು. ಆಗ ನಮ್ಮ ಬದುಕು ಸಾರ್ಥಕ ಎಂದು ಹೇಳಿದರು.

ಬೆಳಗಾವಿ ಜಿಲ್ಲಾಧಿಕಾರಿ ಕಚೇರಿ ಎದುರು ಬೆಳಗಾವಿ ಉತ್ತರ ಕ್ಷೇತ್ರದ ಮಾಜಿ ಶಾಸಕ ಫಿರೋಜ್ ಸೇಠ್, ಶಾಸಕ ರಾಜು ಸೇಠ್ ಸೇರಿ ವಿವಿಧ ಗಣ್ಯರು ಪರಸ್ಪರ ಹಬ್ಬದ ಶುಭಾಶಯಗಳನ್ನು ವಿನಿಮಯಿಸಿಕೊಂಡರು. ಅದರಂತೆ ಬೆಳಗಾವಿ ಹೊರವಲಯದ ವಿವಿಧ ಮಸೀದಿಗಳು, ಈದ್ಗಾಗಳಲ್ಲಿ ಮುಸ್ಲಿಂ ಸಮುದಾಯದವರು ಸೇರಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

## ಪತ್ನಿಗೆ 'ಕಾಲ್ ಗರ್ಲ್' ಪಟ್ಟ : ಪತಿ ಪರಾರಿ



ಪತಿ ಮಹಾಶಯ ಪತ್ನಿಗೆ ಕೊಡಬಾರದ ಹಿಂಸೆ ಕೊಟ್ಟಿದ್ದೂ ಅಲ್ಲದೇ ಆಕೆಯ ಫೋಟೋ, ಮೊಬೈಲ್ ನಂಬರ್ ಗಳನ್ನು ಫೇಸ್ ಬುಕ್ ನಲ್ಲಿ ಪ್ರತ್ಯೇಕ ಖಾತೆ ತೆಗೆದು ಕಾಲ್ ಗರ್ಲ್ ಎಂದು ಹಾಕಿ ಪೋಸ್ಟ್ ಮಾಡಿರುವ ಘಟನೆ ನಡೆದಿದೆ.

ಬೆಂಗಳೂರಿನ ಮಹಾಲಕ್ಷ್ಮೀ ಲೇಔಟ್ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ. ಪತಿ ಸತ್ಯನಾರಾಯಣ ರೆಡ್ಡಿ ಎಂಬಾತ ಈ ರೀತಿ ಮಾಡಿದ್ದಾನೆ ಎಂಬ ಆರೋಪ ಕೇಳಿಬಂದಿದೆ.

2019ರಲ್ಲಿ ಸತ್ಯನಾರಾಯಣ ರೆಡ್ಡಿ ವಿವಾಹವಾಗಿದ್ದ. ಆದರೆ ಪತ್ನಿಗೆ ಸದಾ ಕಿರುಕುಳ ನೀಡುತ್ತಿದ್ದ. ದೈಹಿಕವಾಗಿ ಹಾಗೂ ಮಾನಸಿಕವಾಗಿ ಹಿಂಸಿಸುತ್ತಿದ್ದ. ಪತಿಯ ಹಿಂಸೆಗೆ ಬೇಸತ್ತು ಪತ್ನಿ ಕಳೆದ ಒಂದು ವರ್ಷದಿಂದ ಆತನಿಂದ ದೂರವಾಗಿ ವಾಸವಾಗಿದ್ದಳು. ಆದರೂ ಪತಿಯ ಕಾಟ ತಪ್ಪಿಲ್ಲ.

ಈಗ ಫೇಸ್ ಬುಕ್ ನಲ್ಲಿ ಅಕೌಂಟ್ ಕ್ರಿಯೇಟ್ ಮಾಡಿ ಪತ್ನಿಯ ಫೋಟೋ, ಮೊಬೈಲ್ ನಂಬರ್ ಹಾಗೂ ಪತ್ನಿಯ ಸಹೋದರನ ಮೊಬೈಲ್ ನಂಬರ್ ಗಳನ್ನು ಪೋಸ್ಟ್ ಮಾಡಿ ಕಾಲ್ ಗರ್ಲ್ ಬೇಕಿದ್ದರೆ ಕರೆ ಮಾಡಿ ಎಂದು ಪೋಸ್ಟ್ ಮಾಡಿದ್ದಾನೆ. ಇದರಿಂದ ಪತ್ನಿ ಹಾಗೂ ಆಕೆ ಸಹೋದರನಿಗೆ ನಿರಂತರ ಕರೆಗಳು ಬರಲಾರಂಭಿಸಿವೆ. ಬೇಸತ್ತ ಸಂತ್ರಸ್ತೆ ಹಾಗೂ ಆಕೆಯ ಸಹೋದರ ಮಹಾಲಕ್ಷ್ಮೀ ಲೇಔಟ್ ಠಾಣೆಯಲ್ಲಿ ದೂರು ನೀಡಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ನಡೆಸಿದ್ದಾರೆ.

## ಟೆಕ್‌ಬೈಟ್ಸ್ ಸ್ಟೇಟ್ ಫೈನಲ್ಸ್ ಗೆದ್ದ ಧೀರಜ್ ಅಂಗಡಿ ಬೆಳಗಾವಿ ಕೆಎಲ್‌ಎಸ್ ಎಂಎಸ್ ಶೇಷಗಿರಿ ಕಾಲೇಜ್ ವಿದ್ಯಾರ್ಥಿ




ಬೆಳಗಾವಿ : ಟಾಟಾ ಕನ್ಸಲ್ಟೆನ್ಸಿ ಸರ್ವಿಸಸ್ (ಟಿಸಿ-ಎಸ್) ಮತ್ತು ಕರ್ನಾಟಕ ಸರ್ಕಾರದ ಉತ್ತೇಜಿತ ಸ್ವಾಯತ್ತ ಸಂಸ್ಥೆಯಾದ ಐಟಿ ಶಿಕ್ಷಣ ಮಾನದಂಡಗಳ ಮಂಡಳಿ (ಬೋರ್ಡ್ ಫಾರ್ ಐಟಿ ಎಜುಕೇಷನ್ ಸ್ಟಾಂಡರ್ಡ್ಸ್- ಬೈಟ್ಸ್) 15ನೇ ಆವೃತ್ತಿಯ ಟಿಸಿಎಸ್ ಟೆಕ್‌ಬೈಟ್ಸ್ ವಿಜೇತರನ್ನು ಘೋಷಿಸಿದೆ.

ಪ್ರಥಮ ಬಹುಮಾನ: ಧೀರಜ್ ಅಂಗಡಿ - ಕೆ-ಎಲ್‌ಎಸ್ ಎಂಎಸ್ ಶೇಷಗಿರಿ ಕಾಲೇಜ್ ಆಫ್ ಇಂಜಿನಿಯರಿಂಗ್ & ಟೆಕ್ನಾಲಜಿ, ಬೆಳಗಾವಿ ದ್ವಿತೀಯ ಬಹುಮಾನ: ಕೌಶಿಕ್, ಸುರತ್ಕಲ್ ಟಿಸಿ-ಎಸ್ ಕಂಪನಿಯು ಪ್ರಥಮ ಬಹುಮಾನ ಮತ್ತು ದ್ವಿತೀಯ ಬಹುಮಾನ ಪಡೆದ ವಿದ್ಯಾರ್ಥಿಗಳಿಗೆ ಕ್ರಮವಾಗಿ ರೂ 85,000 ಮತ್ತು ರೂ 50,000 ಶಿಕ್ಷಣ ವಿದ್ಯಾರ್ಥಿ ವೇತನವನ್ನು ನೀಡಿತು. ಜೊತೆಗೆ ಅಂತಿಮ ಹಂತದಲ್ಲಿ ಭಾಗವಹಿಸಿದ ಎಲ್ಲಾ ಸ್ಪರ್ಧಿಗಳಿಗೂ ಶಿಕ್ಷಣ ವಿದ್ಯಾರ್ಥಿ ವೇತನವನ್ನು ನೀಡಿತು. ಟಿಸಿಎಸ್ ಬೆಂಗಳೂ-ರಿನ ಪ್ರಾದೇಶಿಕ ಮುಖ್ಯಸ್ಥ ಸುನಿಲ್ ದೇಶಪಾಂಡೆ, ಏರೋಸ್ಪೇಸ್ ಇಂಜಿನಿಯರಿಂಗ್ ಐಐಎಸ್‌ಸಿಯ ಪ್ರೊ.ಸುರೇಶ್ ಸುಂದರಂ, ಬೈಟ್ಸ್ ನ ಸಹ ಅಧ್ಯಕ್ಷ ಡಾ.ಸೆಲ್ವನ್ ಡಿ ಮತ್ತು ಎಸ್‌ಜೆಬಿಐಟಿ ಪ್ರಾಂಶುಪಾಲ ಡಾ ಕೆ ವಿ

ಮಹೇಂದ್ರ ಪ್ರಶಾಂತ್ ಪ್ರಶಸ್ತಿ ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ಟಿಸಿ-ಎಸ್ ಬೆಂಗಳೂರು ಪ್ರಾದೇಶಿಕ ಮುಖ್ಯಸ್ಥ ಸುನಿಲ್ ದೇಶಪಾಂಡೆ ಮಾತನಾಡಿ, "ಟಿಸಿಎಸ್ ಟೆಕ್ ಬೈಟ್ಸ್ ಬೆಳವಣಿಗೆ ಹೊಂದುತ್ತಿರುವ ತಂತ್ರಜ್ಞಾನ ಟ್ರೆಂಡ್ ಗಳ ಜೊತೆ ಜೊತೆಗೆ ಸಾಗಲು ವಿದ್ಯಾರ್ಥಿಗಳಿಗೆ ಇರುವ ಉತ್ತಮ ಅವಕಾಶವಾಗಿದೆ. ನಿರಂತರ ಕಲಿಕೆಯೆಡೆಗಿನ ಉತ್ಸಾಹವನ್ನು ಪ್ರದರ್ಶಿಸಿದ ಎಲ್ಲಾ ಅಂತಿಮ ಹಂತದ ಸ್ಪರ್ಧಿಗಳ ಪ್ರತಿಭಾ ಪ್ರದರ್ಶನದಿಂದ ನಾವು ಸಂತೋಷ ಹೊಂದಿದ್ದೇವೆ" ಎಂದು ಹೇಳಿದರು.

ಈ ವರ್ಷ ಕರ್ನಾಟಕದಾದ್ಯಂತ 115 ಎಂಜಿನಿಯರಿಂಗ್ ಕಾಲೇಜುಗಳ ವಿದ್ಯಾರ್ಥಿಗಳು ಈ ರಸಪ್ರಶ್ನೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಹುಬ್ಬಳ್ಳಿ, ಮಂಗಳೂರು, ಮೈಸೂರು, ಬೆಂಗಳೂರು, ತುಮಕೂರುಮತ್ತು ಕಲಬುರಗಿಯಲ್ಲಿ ಆರು ಪ್ರಾದೇಶಿಕ ಸುತ್ತುಗಳನ್ನು ಆಯೋಜಿಸಲಾಗಿತ್ತು.

## ಕೋಚರಿ ಏತ ನೀರಾವರಿಯಿಂದ ಕೆನಾಲ್‌ಗಳಿಗೆ ಹರಿದ ನೀರು



ಹುಕ್ಕೇರಿ: ತಾಲೂಕಿನ ಕೋಚರಿ ಏತ ನೀರಾವರಿ ಯೋಜನೆ ಮೂಲಕ ಗುರುವಾರ ವಿವಿಧ ಗ್ರಾಮಗಳ ಕೆನಾಲ್‌ಗಳಿಗೆ ನೀರು ಹರಿಬಿಡಲಾಯಿತು.

ಕೋಚರಿ ಏತ ನೀರಾವರಿ ಯೋಜನೆ ವ್ಯಾಪ್ತಿಯ ಸುಲ್ತಾನಪೂರ, ಶಿರಗಾಂವ, ಬೆಣಿವಾಡ, ಮದಿಹಳ್ಳಿ, ಮದಮಕ್ಕನಾಳ, ಬಸ್ತವಾಡ, ಹುಕ್ಕೇರಿ, ಮಸರಗುಪ್ಪಿ ಕಾಲುವೆಗಳಿಗೆ ನೀರು ಹರಿಬಿಡಲಾಯಿತು. ಇದರಿಂದ ಈ ಪ್ರದೇಶಗಳ ಜನ ಹಾಗೂ ಜಾನುವಾರುಗಳ ಕುಡಿಯುವ ನೀರಿನ ಬವಣೆ ನೀಗಿಸಿದಂತಾಗಿದೆ.

ಡಿಸಿಸಿ ಬ್ಯಾಂಕ್ ಅಧ್ಯಕ್ಷ ರಮೇಶ ಕತ್ತಿ, ಶಾಸಕ ನಿಖಿಲ ಕತ್ತಿ ಅವರ ಸೂಚನೆ ಮೇರೆಗೆ ಪಂಪಹೌಸ್ ದುರಸ್ತಿ ಮಾಡಲಾಗಿದ್ದು ಉದ್ಯೋಗ ಖಾತರಿ ಯೋಜನೆಯಲ್ಲಿಯೂ ಕಾಲುವೆಗಳ ಹೂಳು ತೆಗೆಯಲು ಕ್ರಮ ಕೈಗೊಳ್ಳಲಾಗಿದೆ.

ಮಹತ್ವಾಕಾಂಕ್ಷಿ ಈ ಯೋಜನೆಯ ಕೊನೆಯ ಹಂತದವರೆಗೂ ಸರಾಗವಾಗಿ ನೀರು ಸಾಗಲು ಕೋಚರಿ ಪಂಪ್‌ಹೌಸ್‌ನಲ್ಲಿ ಹೊಸ ಪಂಪ್ ಮತ್ತು ಮೋಟಾರ್‌ಗಳನ್ನು ಅಳವಡಿಸಲಾಗಿದೆ. ಇದಕ್ಕಾಗಿ 1.70 ಕೋಟಿ ರೂ,ಗಳನ್ನು ವೆಚ್ಚ ಮಾಡುವ ಮೂಲಕ ಯೋಜನೆಯನ್ನು ನವೀಕರಣಗೊಳಿಸಲಾಗಿದೆ.

ಈ ವೇಳೆ ಯುವ ನಾಯಕರಾದ ಪೃಥ್ವಿ ಕತ್ತಿ, ಪವನ ಕತ್ತಿ ಮಾತನಾಡಿ, ಬೇಸಿಗೆ-ಬರಗಾಲದಲ್ಲಿ ಈ ಸಂದರ್ಭದಲ್ಲಿ ರೈತರ ಹಿತ ಕಾಪಾಡಲು ಯೋಜನೆ ನವೀಕರಣಗೊಳಿಸಲಾಗಿದೆ. ಈ ವ್ಯಾಪ್ತಿಯ ಗ್ರಾಮಗಳ ರೈತರು ನೀರನ್ನು ಹಿತ-ಮಿತವಾಗಿ ಬಳಸಿಕೊಂಡು ಸದುಪಯೋಗ ಮಾಡಿಕೊಳ್ಳಬೇಕು ಎಂದರು.

ಜಿಆರ್‌ಬಿಸಿ ಮೆಕ್ಯಾನಿಕಲ್ ವಿಭಾಗದ ಎಇಇ ಮಂಜುನಾಥ ಹೊಸಮನಿ, ಗುತ್ತಿಗೆದಾರ ಬಸವರಾಜ ಗಂಗಣ್ಣವರ, ನ್ಯಾಯವಾದಿ ಭೀಮಸೇನ ಬಾಗಿ, ಮುಖಂಡರಾದ ಮಹಾದೇವ ಪಾಟೀಲ, ಬಸವಂತ ರೆಡ್ಡಿ, ಶ್ರೀಶೈಲ ಮಠಪತಿ, ಮಹಾನಿಂಗ ಸನದಿ, ಶಿವನಗೌಡ ಮದವಾಲ, ಮಾರುತಿ ಬನ್ನನವರ, ರಾಯಪ್ಪಾ ವಿಭೂತಿ, ಮಾರುತಿ ಬಾಗಿ ಮತ್ತಿತರರು ಉಪಸ್ಥಿತರಿದ್ದರು.

## 'ಕುಡಿಯಬೇಡಿ' ಎಂದಿದ್ದಕ್ಕೆ ವ್ಯಕ್ತಿಯನ್ನು ಇರಿದು ಕೊಂದ ಯುವಕರು



ಬೆಂಗಳೂರು: ಕುಡಿತದಿಂದ ದೂರವಿರಿ ಎಂದು ಯುವಕರಿಗೆ ಸಲಹೆ ನೀಡಿದ ಹಿನ್ನೆಲೆಯಲ್ಲಿ ಆಕ್ರೋಶ ಗೊಂಡ ಇಬ್ಬರು ಯುವಕರನು 45 ವರ್ಷದ ವ್ಯಕ್ತಿಯೊಬ್ಬರನ್ನು ಇರಿದು ಕೊಂದಿರುವ ಘಟನೆ ವಿದ್ಯಾರಣ್ಯಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ರಾಮಚಂದ್ರಾಪುರ ನಿವಾಸಿ ವೆಂಕಟೇಶ್ ಕೊಲೆಯಾದ ವ್ಯಕ್ತಿ. ವೆಂಕಟೇಶ್ ಮಂಗಳವಾರ ರಾತ್ರಿ 10.30ರ ಸುಮಾ-ರಿಗೆ ರಾಮಚಂದ್ರಾಪುರ ಆಟದ ಮೈದಾನದ ಕಡೆಗೆ ವಾಕಿಂಗ್ ಹೋಗಿದ್ದರು. ಈ ವೇಳೆ ಬಸ್ ನಿಲ್ದಾಣದ ಬಳಿ ಇಬ್ಬರು ಯುವಕರು ಮದ್ಯ ಸೇವಿಸುತ್ತಿರುವುದನ್ನು ನೋಡಿದ್ದಾರೆ.

ಅವರ ಬಳಿ ಹೋದ ವೆಂಕಟೇಶ್ ಇನ್ನು ನೀವು ಚಿಕ್ಕ ವಯಸ್ಸಿನವರು, ಕುಡಿತದಿಂದ ದೂರವಿರಬೇಕು ಎಂದು ಸಲಹೆ ನೀಡಿದರು. ವೆಂಕಟೇಶ್ ಅವರ ಮಾತಿನಿಂದ ಕುಪಿತಗೊಂಡ ಆರೋಪಿಗಳು ಚಾಕುವಿನಿಂದ ಇರಿದು ಪರಾರಿಯಾಗಿದ್ದಾರೆ. ವೆಂಕಟೇಶ್ ರಕ್ತದ ಮಡುವಿನಲ್ಲಿ ಬಿದ್ದಿರುವುದನ್ನು ಕಂಡ ದಾರಿಹೋಕರು ಪೊಲೀಸ-ರಿಗೆ ಮಾಹಿತಿ ನೀಡಿದ್ದಾರೆ. ಆಸ್ಪತ್ರೆಯಲ್ಲಿದ್ದ ವೆಂಕಟೇಶ್ ಬುಧವಾರ ಮುಂಜಾನೆ 4 ಗಂಟೆ ಸುಮಾರಿಗೆ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ಕ್ಷಿಪ್ರ ಕಾರ್ಯಾಚರಣೆಯಲ್ಲಿ ಪವನ್ ಕುಮಾರ್ (24), ಮತ್ತು ನಂದ ಅಲಿಯಾಸ್ ನಂದ ಗೋಪಾಲ್ (21) ಎಂಬುವರನ್ನು ಪೊಲೀಸರು ಬಂಧಿಸಿದ್ದಾರೆ.

## ನಿಪ್ಪಾಣಿ: 25 ಎನ್‌ಸಿಪಿ ಕಾರ್ಯಕರ್ತರು ಬಿಜೆಪಿಗೆ ಸೇರ್ಪಡೆ

ನಿಪ್ಪಾಣಿ: ತಾಲ್ಲೂಕಿನ ಶೇಂಡೂರ ಗ್ರಾಮದ ಸುಮಾರು 25 ಎನ್ಸಿಪಿ ಕಾರ್ಯಕರ್ತರು ಬಿಜೆಪಿಗೆ ಸೇರ್ಪಡೆಗೊಂಡರು. ತಾಲ್ಲೂಕಿನ ಭಿವಶಿ ಗ್ರಾಮದಲ್ಲಿ ಶಾಸಕಿ ಶಶಿಕಲಾ ಜೊಲ್ಲೆ ಎಲ್ಲ ಕಾರ್ಯಕರ್ತರನ್ನು ಪಕ್ಷದ ಶಾಲು ಹೊದಿಸಿ ಬರಮಾಡಿಕೊಂಡರು.

ಗ್ರಾಮದ ರಾಜೇಂದ್ರ ಲಾಡ, ಪ್ರವೀಣ ಲಾಡ ನೇತೃತ್ವದಲ್ಲಿ ವಿನಾಯಕ ಗಿರಿ, ತುಕಾರಾಮ ವಡೆಖರ, ಪಾಂಡುರಂಗ ಲಾಡ, ಗಜಾನನ ಕಾಂಬಳೆ, ರಾಜೇಂದ್ರ ದಳವಿ, ಅಣ್ಣಪ್ಪಾ ತೋಡಕರ, ಸಂದೀಪ ದೇಸಾಯಿ, ಮೊದಲಾದವರು ಸೇರಿದಂತೆ ಸುಮಾರು 25 ಕಾರ್ಯಕರ್ತರು ಎನ್ಸಿಪಿ ಪಕ್ಷ ತೊರೆದು ಬಿಜೆಪಿಗೆ ಸೇರ್ಪಡೆಗೊಂಡರು.



ಶಾಸಕಿ ಶಶಿಕಲಾ ಜೊಲ್ಲೆ ಮಾತನಾಡಿ, 'ಕಳೆದ 10 ವರ್ಷಗಳಲ್ಲಿ ಬಿಜೆಪಿ ಭಾರತದ ಚಿತ್ರಣವೇ ಬದಲಾಯಿಸಿದೆ. ಸಂಸದ ಅಣ್ಣಾಸಾಹೇಬ ಜೊಲ್ಲೆಯವರು ತಮ್ಮ ಆಡಳಿತ ಅವಧಿಯಲ್ಲಿ ರೂ 8,810 ಕೋಟಿಗೂ ಅಧಿಕ ಅಭಿವೃದ್ಧಿ ಕಾಮಗಾರಿಗಳನ್ನು ತಮ್ಮ ಕ್ಷೇತ್ರದಲ್ಲಿ ಕೈಗೊಂಡಿದ್ದಾರೆ. ಇದು ಅವರ ಗೆಲುವಿಗೆ ಶ್ರೀರಕ್ಷೆಯಾಗಲಿದೆ' ಎಂದರು.

## ಶಿವರಾಮ್ ಹೆಬ್ಬಾರ್ ಪುತ್ರ ಕಾಂಗ್ರೆಸ್ ಸೇರ್ಪಡೆ

ಕಾರವಾರ: ವಿಧಾನಸಭಾ ಚುನಾವಣೆ ಬಳಿಕ ಪಕ್ಷದಿಂದ ಅಂತರ ಕಾಯ್ದುಕೊಂಡಿದ್ದ ಯಲ್ಲಾಪುರ ಬಿಜೆಪಿ ಶಾಸಕ ಶಿವರಾಮ್ ಹೆಬ್ಬಾರ್ ಪುತ್ರ ವಿವೇಕ್ ಹೆಬ್ಬಾರ್ ಕಾಂಗ್ರೆಸ್ ಸೇರ್ಪಡೆಯಾದರು. ಉತ್ತರ ಕನ್ನಡ ಜಿಲ್ಲೆಯ ಶಿರಸಿ ತಾಲೂಕಿನ ಬನವಾಸಿಯಲ್ಲಿ ಗುರುವಾರ (ಏಪ್ರಿಲ್ 11) ತಮ್ಮ ನೂರಾರು ಬೆಂಬಲಿಗರೊಂದಿಗೆ ವಿವೇಕ್ ಕಾಂಗ್ರೆಸ್ ಸೇರ್ಪಡೆಗೊಂಡರು. ಇನ್ನು ಅವರ ತಂದೆ ಶಿವರಾಮ್ ಹೆಬ್ಬಾರ್ ಅವರು ಯಾವಾಗ ಬಿಜೆಪಿ ತೊರೆದು ಕಾಂಗ್ರೆಸ್ ಸೇರುತ್ತಾರೆ ಎನ್ನುವ ಚರ್ಚೆ ಶುರುವಾಗಿದೆ.



ಕಾಂಗ್ರೆಸ್ ಸೇರ್ಪಡೆ ಬಳಿಕ ಶಾಸಕ ಶಿವರಾಮ್ ಹೆಬ್ಬಾರ್ ಪುತ್ರ ವಿವೇಕ ಹೆಬ್ಬಾರ್ ಮಾತನಾಡಿದ್ದು, ನನ್ನ ತಂದೆಯವರು ಕಾಂಗ್ರೆಸ್ ಸೇರ್ಪಡೆ ಆಗುವುದರ ಬಗ್ಗೆ ನನಗೆ ಗೊತ್ತಿಲ್ಲ. ನಮ್ಮ ಕಾರ್ಯರ್ತರಿಗೆ ಪಕ್ಷದಲ್ಲಿ ಆದ ತಾರತಮ್ಯ ಮನಗಂಡು ಈ ನಿರ್ಧಾರಕ್ಕೆ ಬಂದಿದ್ದೆನೆ.

ನಮ್ಮ ಕಾರ್ಯರ್ತರಿಗೆ ಪಕ್ಷದಲ್ಲಿ ಸ್ಥಾನ ಮಾನ ಕೊಡಿಸುವ ವಿಚಾರದಲ್ಲಿ ಅಸಮಾಧಾನ ಆಗಿದೆ. ವಿಧಾನ ಸಭೆ ಚುನಾವಣೆಯಲ್ಲಿ ಕೆಲ ಬಿಜೆಪಿಯವರೆ ನಮ್ಮ ತಂದೆಯವರನ್ನ ಸೋಲಿಸಲು ಪ್ರಯತ್ನಿಸಿದ್ರು. ಆದ್ರು ಸಹಿತ ನಮ್ಮ ತಂದೆಯವರಾದ ಶಿವರಾಮ್ ಹೆಬ್ಬಾರ್ ಗೆಲುವು ಸಾಧಿಸಿದ್ರು. ಪಕ್ಷ ವಿರೋಧಿ ಚಟುವಟಿಕೆ ಮಾಡಿದವರ ವಿರುದ್ಧ ಕ್ರಮ ತೆಗೆದುಕೊಳ್ಳಬೇಕಿತ್ತು. ಆದ್ರೆ ಅವರಿಗೆ ಪಕ್ಷದ ಉನ್ನತ ಸ್ಥಾನಗಳಲ್ಲಿ ಕೆಲಸ ಮಾಡುವ ಅವಕಾಶ ಕೊಟ್ಟಿದ್ದು ನಮಗೆ ಅಸಮಾಧಾನ ಉಂಟು ಮಾಡಿತು ಎಂದು ಬಿಜೆಪಿ ವಿರುದ್ಧ ಕಿಡಿಕಾರಿದರು.

## ಏ.12 ರಿಂದ ಉಮೇದುವಾರಿಕೆ ಸಲ್ಲಿಕೆ ಆರಂಭ, ಏ.19 ಕೊನೆಯ ದಿನ: ಜಿಲ್ಲಾ ಚುನಾವಣಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ

ಬಳ್ಳಾರಿ: ಬಳ್ಳಾರಿ (ಪ.ಪಂ) ಲೋಕಸಭಾ ಮೀಸಲು ಕ್ಷೇತ್ರದಲ್ಲಿ ಮೇ 07 ರಂದು ನಡೆಯಲಿರುವ ಚುನಾವಣೆಗೆ ಏ.12 ರಂದು ಅಧಿಸೂಚನೆ ಪ್ರಕಟಗೊಳ್ಳಲಿದ್ದು ಅಂದಿನಿಂದಲೇ ನಾಮಪತ್ರ ಸಲ್ಲಿಕೆ ಪ್ರಾರಂಭವಾಗಲಿದೆ, ಏ.19 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದರು.

ಜಿಲ್ಲಾಡಳಿತ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ 09-ಬಳ್ಳಾರಿ(ಪ.ಪಂ) ಲೋಕಸಭಾ ಕ್ಷೇತ್ರದ ಅಧಿಸೂಚನೆ ಪ್ರಕಟ ಸಂಬಂಧ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಲು ಎರಡನೇ ಶನಿವಾರ ಮತ್ತು ಭಾನುವಾರ ಹೊರತುಪಡಿಸಿ, ಇನ್ನುಳಿದ ದಿನಗಳಲ್ಲಿ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 03 ಗಂಟೆಯವರೆಗೆ ಏ.19 ರವರೆಗೆ ಜಿಲ್ಲಾಧಿಕಾರಿಗಳ ಕಚೇ-ರಿಯಲ್ಲಿ ನಾಮಪತ್ರ ಸಲ್ಲಿಸಬಹುದು.

ಏ.20 ರಂದು ಅಭ್ಯರ್ಥಿಗಳು ಸಲ್ಲಿಸಿದ ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಏ.22 ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ ಎಂದು ಹೇಳಿದರು.



ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಕ್ರಮಬದ್ಧ ನಾಮಪತ್ರ ಸಲ್ಲಿಸಬೇಕು, ಈಗಾಗಲೇ ಜಿಲ್ಲಾಧಿಕಾರಿಗಳ ಕಚೇರಿಯ ಸುತ್ತ 100 ಮೀಟರ್ ವ್ಯಾಪ್ತಿಯಲ್ಲಿ 144ರ ಸೆಕ್ಷನ್ ಕಾಯ್ದೆ ಜಾರಿ ಮಾಡಿದೆ.

ನಾಮಪತ್ರ ಸಲ್ಲಿಸುವ ಉಮೇದುವಾರರೊಂದಿಗೆ 4 ಮಂದಿಗೆ ಮಾತ್ರ ಚುನಾವಣಾಧಿಕಾರಿಗಳ ಕಚೇರಿಗೆ ಬರಲು ಅನುಮತಿ ನೀಡಲಾಗಿದೆ.

ಒಟ್ಟು 5 ಮಂದಿಗೆ ಮಾತ್ರ ನಾಮಪತ್ರ ಸಲ್ಲಿಸುವ ಸಂದರ್ಭದಲ್ಲಿ ಇರಲು ಅವಕಾಶ ಕಲ್ಪಿಸಲಾಗಿದೆ ಎಂದರು.

ನಾಮಪತ್ರಗಳ ಪರಿಶೀಲನೆ ನಂತರ ಏ.20 ರಂದು ನಾಮಪತ್ರ ವಾಪಸ್ಸಾತಿ ಕಾಲಾವಕಾಶ ಮುಗಿದ ನಂತರ ಅಂತಿಮವಾಗಿ ಚುನಾವಣಾ ಕಣದಲ್ಲಿರುವ ಅಭ್ಯರ್ಥಿಗಳನ್ನು ಪ್ರಕಟಿಸಲಾಗುವುದು. ಮೇ 07 ರಂದು ಮತದಾನ ನಡೆಯಲಿದ್ದು, ಜೂ.4 ರಂದು ಮತ ಎಣಿಕೆ ನಡೆಯಲಿದೆ. ಜೂ.6 ರಂದು ಚುನಾವಣೆ ಪ್ರಕ್ರಿಯೆ ಸಂಪೂರ್ಣಗೊಳ್ಳಲಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಪೊಲೀಸ್ ವರಿಗಣ್ಠಧಿಕಾರಿ ರಂಜಿತ್ ಕುಮಾರ್ ಬಂಡಾರು ಸೇರಿದಂತೆ ಜಿಲ್ಲಾ ಚುನಾವಣಾಧಿಕಾರಿ ಕಚೇರಿಯ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ನಿಮ್ಮ ಸೇವೆ ಮಾಡಲು ನನಗೆ ಒಂದು ಅವಕಾಶ ಕೊಡಿ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ

## ಬೆನಕನಹೊಳಿ, ಕೇರಿಮಾಸ್ತಿಹೊಳಿ, ನರಸಿಂಗಪೂರ, ಮಜತಿ, ಮಾನಗಾಂವ ಗ್ರಾಮಗಳಲ್ಲಿ ಮತಯಾಚನೆ

ಬೆಳಗಾವಿ: ಬಡವರು ಹಾಗೂ ಜನಸಾಮಾನ್ಯರ ಪರ ಕೆಲಸ ಮಾಡಿ ಅವರ ಕುಂದು ಕೊರತೆಗಳಿಗೆ ಸ್ಪಂದಿಸುವಂತಹ ಕಾಂಗ್ರೆಸ್ ಪಕ್ಷ. ಹೀಗಾಗಿ ಮೇ 7ರಂದು ನಡೆಯಲಿರುವ ಚಿಕ್ಕೋಡಿ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ನನ್ನನ್ನು ಆಶೀರ್ವದಿಸಬೇಕು ಎಂದು ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮತದಾರರಲ್ಲಿ ಮನವಿ ಮಾಡಿದರು.

ಹುಕ್ಕೇರಿ ವಿಧಾನಸಭಾ ಕ್ಷೇತ್ರದ ಬೆನಕನಹೊಳಿ, ಕೇರಿಮಾಸ್ತಿಹೊಳಿ, ನರಸಿಂಗಪೂರ, ಮಜತಿ, ಮಾನಗಾಂವ ಗ್ರಾಮಗಳಲ್ಲಿ ಮತಯಾಚಿಸಿ ನಂತರ ಮಾತನಾಡಿದ ಅವರು, ಮತಕ್ಷೇತ್ರದಲ್ಲಿ ಈಗಾಗಲೇ ನಮ್ಮ ತಂದೆಯವರು ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿ ರಾಜ್ಯದಲ್ಲಿ ಮಾದರಿ ಕ್ಷೇತ್ರವನ್ನಾಗಿ ರೂಪಿಸಿದ್ದಾರೆ. ಅಲ್ಲದೇ ಕಳೆದ 15 ವರ್ಷಗಳ ಅವಧಿಯಲ್ಲಿ ಮತಕ್ಷೇತ್ರದ ಅನೇಕ ಗ್ರಾಮಗಳಲ್ಲಿ ಬೇಡಿಕೆಗೆ ಅನುಗುಣವಾಗಿ ಶಾಲಾ–ಕಾಲೇಜುಗಳನ್ನು ನಿರ್ಮಿಸಿ ಶೈಕ್ಷಣಿಕ ಅಭಿವೃದ್ಧಿಗೆ ಆದ್ಯತೆ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಇನ್ನೂ ಹತ್ತಾರು ಅಭಿವೃದ್ಧಿ ಕಾರ್ಯಗಳನ್ನು ಈ ಕ್ಷೇತ್ರದಲ್ಲಿ ಮಾಡಲು ಮತದಾರರು ಕಾಂಗ್ರೆಸ್ ಪಕ್ಷಕ್ಕೆ ಮತ ನೀಡ ನನಗೆ ಆಶೀರ್ವಾದ ಮಾಡಬೇಕು ಎಂದು ಮತದಾರರಲ್ಲಿ ಮನವಿ ಮಾಡಿದರು.



ನಿಮ್ಮ ಸೇವೆ ಮಾಡಲು ನನಗೆ ಒಂದು ಅವಕಾಶ ಮಾಡಿಕೊಡಿ. ನಾನು ಸದಾ ನಿಮ್ಮ ಕಷ್ಟ, ಸುಖದಲ್ಲಿ ಭಾಗಿಯಾಗಿರುತ್ತೇನೆ. ನೀವು ಕೊಡುವ ಅವಕಾಶವನ್ನು ಬಳಸಿಕೊಂಡು ಪ್ರಾಮಾಣಿಕತೆಯಿಂದ, ಶ್ರದ್ಧೆಯಿಂದ ಕೆಲಸ ಮಾಡಿ ನಂಬಿಕೆ ಉಳಿಸಿಕೊಳ್ಳುತ್ತೇನೆ ಎಂದ ಅವರು, ಹಿಂದಿನ ಅವಧಿಯಲ್ಲಿ ಬಿಜೆಪಿಯಿಂದ ಜೊಲ್ಲೆ ಸಂಸದರಾಗಿ ಆಯ್ಕೆಯಾಗಿ ಬಂದರೂ ಈ ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ಆಗಿಲ್ಲ. ಇಲ್ಲಿಯ ಪರಿಸ್ಥಿತಿ ನೋಡಿದರೆ ರೈತರ ಬಗ್ಗೆ ಕಾಳಜಿ ಇಲ್ಲದ ಸಂಸದರಾಗಿದ್ದಾರೆ. ರಾಜ್ಯದಲ್ಲಿ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದು 5 ಗ್ಯಾರಂಟಿಗಳನ್ನು ಜಾರಿಗೊಳಿಸಿದೆ. ಪ್ರತಿಯೊಂದು ಕುಟುಂಬಗಳಿಗೆ ನಾಲ್ಕರಿಂದ ಐದು ಸಾವಿರ ಹಣ ಉಳಿತಾಯವಾಗುತ್ತಿದೆ. ಗೃಹಲಕ್ಷ್ಮಿ ಯೋಜನೆಯಿಂದ ಪ್ರತಿಯೊಂದು ಮನೆಯ ಗೃಹಿಣಿಯರು 2000 ಪಡೆದುಕೊಳ್ಳುತ್ತಿದ್ದಾರೆ. ವಿಧ್ಯುತ್ ಅನ್ನು ಉಚಿತವಾಗಿ ಪಡೆದುಕೊಳ್ಳುತ್ತಿದ್ದಾರೆ. ಶಕ್ತಿ ಯೋಜನೆಯಡಿ ಉಚಿತವಾಗಿ ಮಹಿಳೆಯರು ಪ್ರಯಾಣ ಮಾಡುತ್ತಿದ್ದಾರೆ. ಅನ್ನಭಾಗ್ಯದಲ್ಲಿ 5 ಕೆಜಿ ಅಕ್ಕಿ 5 ಕೆ.ಜಿ ಗೆ ಹಣವನ್ನು ಪಡೆಯುತ್ತಿದ್ದಾರೆ ಎಂದರು.

ಶೈಕ್ಷಣಿಕ ಸೇರಿದಂತೆ ಕ್ರೀಡಾ ಪಟುಗಳಿಗೆ ಸತೀಶ ಜಾರಕಿಹೊಳಿ ಫೌಂಡೇಶನ್ ದಿಂದ ಸಹಾಯ–ಸಹಕಾರ ಮಾಡಲಾಗಿದೆ. ನಿಮ್ಮ ಮನೆ ಮಗಳನ್ನು ಮತದಾರರು ಸಹಕ–ರಿಸಬೇಕು. ಈ ಕ್ಷೇತ್ರದಿಂದ ಗೆಲ್ಲಲು ಶಕ್ತಿ ತುಂಬಬೇಕು.

ದೇಶದಲ್ಲಿ ಸ್ವಚ್ಛ ಆಡಳಿತ ನೀಡಿದವರು ಕಾಂಗ್ರೆಸ್, ದೇಶಕ್ಕೆ ಸ್ವಾತಂತ್ರ್ಯ ಸಿಗಲು ಹೋರಾಟ ಮಾಡಿದವರು ಕಾಂಗ್ರೆಸ್ . ಹೀಗಾಗಿ ಜಿಲ್ಲೆ ಸೇರಿದಂತೆ ದೇಶದ ಅಭಿವೃದ್ಧಿಗೆ ಕಾರಣವಾಗಿರುವ ಕಾಂಗ್ರೆಸ್ ಪಕ್ಷದ ಗೆಲುವಿಗೆ ಪಣತೊಟ್ಟು ನನ್ನ ಗೆಲುವಿಗೆ ಕಾರ್ಯಕರ್ತರು ಮುಂದಾಗಬೇಕು. ಸಿಎಂ ಸಿದ್ದರಾಮಯ್ಯನವರ ಹಾಗೂ ನಮ್ಮ ತಂದೆಯವರಾದ ಸತೀಶ್ ಜಾರಕಿಹೊಳಿಯವರ ಆಶೀರ್ವಾದದಿಂದ ನನ್ನಗೆ ಲೋಕಸಭೆಯಲ್ಲಿ ಸ್ಪರ್ಧಿಸಲು ಅವಕಾಶ ಸಿಕ್ಕಿದೆ. ಆದಕಾರಣ ತಾವೆಲ್ಲರೂ ಒಟ್ಟಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ ಗೆಲ್ಲಿಸಬೇಕು ಎಂದು ಮತದಾರರಲ್ಲಿ ಮನವಿ ಮಾಡಿದರು. ಈ ವೇಳೆ ಗ್ರಾಮಕ್ಕೆ ಆಗಮಿಸಿದ ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಮಹಿಳೆಯರು ಹೂ ಮಾಲೆ ಹಾಕಿ ಸನ್ಮಾನಿಸಿದರು.

ಈ ವೇಳೆ ಅರ್ಜುನ್ ಘಸ್ತಿ, ಬಸು ದರನತಿ, ಸುರೇಶ ನಾಯ್ಕು, ಸತೀಶ್ ನಾಯ್ಕ್, ಮಾರುತಿ ಘಸ್ತಿ, ಕಡೇಶ್ ಮೇಕಾಲಿ, ಕಮಲವ್ವ ವಾಲೀಕಾರ, ಯಲ್ಲವ್ವ ಕೋಳಿ, ಬಸು ವಾಲಿಕರ್, ರಾಮಗೊಂಡ, ಬಾಳೇಶ್ ಮಾವನೂರೆ ಸೇರಿದಂತೆ ವಿವಿಧ ಗ್ರಾಮದ ಹಿರಿಯ ಮುಖಂಡರು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

# ಮುಸ್ಲಿಂ ಬಾಂಧವರಿಗೆ 'ರಂಜಾನ್' ಹಬ್ಬದ ಶುಭಾಶಯ ಕೋರಿದ ಪ್ರಿಯಂಕಾ ಜಾರಕಿಹೊಳಿ



ಬೆಳಗಾವಿ: ಶ್ರದ್ಧಾ ಭಕ್ತಿಯ ಪ್ರತೀಕವಾದ ರಂಜಾನ್ ಹಬ್ಬವು ನಾಡಿನಲ್ಲಿ ಸುಖ, ಶಾಂತಿ ಸೌಹಾರ್ದತೆಯು ನೆಲೆಗೊಳ್ಳಲು ಪ್ರೇರಣೆಯಾಗಲಿ ಎಂದು ಹಾರೈಸುತ್ತೇನೆ.

ಸಮಸ್ತ ಮುಸ್ಲಿಂ ಬಾಂಧವ–ರಿಗೆ ರಂಜಾನ್ ಹಬ್ಬದ ಶುಭಾಶಯಗಳು ಎಂದು ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಶುಭಾಶಯ ಕೋರಿದ್ದಾರೆ.

ಈ ಕುರಿತು ಪ್ರಕಟಣೆಯಲ್ಲಿ ವಿಷಯ ತಿಳಿಸಿದ ಅವರು, ತ್ಯಾಗ, ಪ್ರೀತಿ, ಸೌಹಾರ್ದತೆಯ ಸಂಕೇತವಾದ ರಂಜಾನ್ ಹಬ್ಬವು ಎಲ್ಲರಿಗೂ ಸುಖ, ಶಾಂತಿ ಕರುಣಿಸಲಿ. ಧಾರ್ಮಿಕ ನಂಬಿಕೆಗಳ ಪ್ರಕಾರ ಅತ್ಯಂತ ಪವಿತ್ರವಾದ ಉಪವಾಸ ವ್ರತಾಚರಣೆ ಮಾಡುವ ರಂಜಾನ್ ಮಾಸವು ನಾಡಿನಲ್ಲಿ ಸ್ನೇಹ, ಸೌಹಾರ್ದತೆ, ಸಮೃದ್ಧಿಗೆ ಪ್ರೇರಣೆಯಾಗಲಿ ಎಂದು ಶುಭ ಹಾರೈಸಿದ್ದಾರೆ.

# ಅಪಘಾತ: ಮೂವರ ದುರ್ಮರಣ




ದಾವಣಗೆರೆ: ಕಾರು ಹಾಗೂ ಕೆಎಸ್‌ಆರ್‌ಟಿಸಿ ಬಸ್ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಮೂವರು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ದಾವಣಗೆರೆ ಜಿಲ್ಲೆಯ ನ್ಯಾಮತಿ ತಾಲೂಕಿನ ಚಿನ್ನಕಟ್ಟೆ–ಶಿವಪುರ ಬಳಿ ನಡೆದಿದೆ. ಮೃತ ದುರ್ದೈವಿಗಳನ್ನು ಸೂರಗೊಂಡನಕೊಪ್ಪ ನಿವಾಸಿಗಳಾದ ದೇವರಾಜ್(27), ರಾಕೇಶ್(30) ಹಾಗೂ ಹರಮಘಟ್ಟ ಗ್ರಾಮದ ನಂಜುಂಡಪ್ಪ(83) ಎಂದು ಗುರುತಿಸಲಾಗಿದೆ. ಅಪಘಾತದಲ್ಲಿ ಆರಕ್ಕೂ ಹೆಚ್ಚು ಮಂದಿ ಗಂಭೀರವಾಗಿ ಗಾಯಗೊಂಡಿದ್ದು, ಗಾಯಾಳುಗಳನ್ನು ಹೆಚ್ಚಿನ ಚಿಕಿತ್ಸೆಗಾಗಿ ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಘಟನೆ ಕುರಿತು ಪ್ರತಿಕ್ರಿಯಿಸಿರುವ ನ್ಯಾಮತಿ ಪೊಲೀಸರು ಓಮಿನಿ ಕಾರಿನಲ್ಲಿ ಸೂರಗೊಂಡನಕೊಪ್ಪದಿಂದ ಶಿಕಾ–ರಿಪುರದತ್ತ ತೆರಳುತ್ತಿದ್ದ ವೇಳೆ ಶಿವಮೊಗ್ಗದತ್ತ ತೆರಳುತ್ತಿದ್ದಕಡೆ ಹೊರಟಿದ್ದ ಬಸ್ ಡಿಕ್ಕಿ ಹೊಡೆದು ಅಪಘಾತ ಸಂಭವಿಸಿದೆ. ಪ್ರಕರಣ ದಾಖಲಿಸಿಕೊಳ್ಳಲಾಗಿದ್ದು, ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ ಎಂದು ನ್ಯಾಮತಿ ಪೊಲೀಸರು ತಿಳಿಸಿದ್ದಾರೆ.

# ಬೆನ್ನುಹುರಿ ಶಸ್ತ್ರ ಚಿಕಿತ್ಸಕರ ಭೇಟಿ

ಬೆಳಗಾವಿ: ಕೆಎಲ್‌ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆ ಹಾಗೂ ವೈದ್ಯಕೀಯ ಸಂಶೋಧನಾ ಕೇಂದ್ರದಲ್ಲಿ ಬೆನ್ನುಹುರಿ ತಪಾಸಣೆಯನ್ನು ಶನಿವಾರ ದಿ. 10 ಏಪ್ರೀಲ್ 2024 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಏರ್ಪಡಿಸಲಾಗಿದೆ. ಪುಣೆಯ ಬೆನ್ನುಹುರಿ ಶಸ್ತ್ರಚಿಕಿತ್ಸಕರಾದ ಡಾ. ಸಂಜಯ ಪಾಟೀಲ ಅವರು ಆಗಮಿಸಲಿದ್ದು, ಬೆನ್ನುಹುರಿ ತೊಂದರೆಯಿಂದ ಬಳಲುತ್ತಿರುವವರನ್ನು ತಪಾಸಿಸಿ ಸೂಕ್ತ ಸಲಹೆ ಮತ್ತು ಶಸ್ತ್ರಚಿಕಿತ್ಸೆ ಕುರಿತು ಪರಿಹಾರ ತಿಳಿಸಲಿದ್ದಾರೆ.

ಈ ಭೇಟಿಯ ಸದಪಯೋಗವನ್ನು ಪಡೆದುಕೊಳ್ಳುವಂತೆ ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕರು ಕೋರಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಕೆ–ಎಲ್‌ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆ ಮತ್ತು ವೈದ್ಯಕೀಯ ಸಂಶೋಧನಾ ಕೇಂದ್ರದ ಜನಸಂಪರ್ಕ ವಿಭಾಗ ಅಥವಾ ದೂ. 2473777, (ವಿಸ್ತೀರ್ಣ: 1116 \ 1117), ಇಲ್ಲಿಗೆ ಸಂಪರ್ಕಿಸಲು ಅರಿಕೆ.

# ನಮ್ಮ ಸಾಧನೆ, ಬದ್ಧತೆ ನೋಡಿ ಮತ ಕೊಡಿ: ಚನ್ನರಾಜ ಹಟ್ಟಿಹೊಳಿ

## ಕಾರ್ಯಕರ್ತರ ಸಭೆ ; ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲೇ 75 ಸಾವಿರಕ್ಕಿಂತ ಹೆಚ್ಚು ಲೀಡ್ ಕೊಡುವ ಅಭಯ

ಬೆಳಗಾವಿ: ನಾವು ಯಾರನ್ನೋ ನೋಡಿ ಮತ ಕೊಡಿ ಎಂದು ಕೇಳುವುದಿಲ್ಲ. ನಮ್ಮ ಇಲ್ಲಿಯವರೆಗಿನ ಸಾಧನೆ, ಬದ್ಧತೆ ಮತ್ತು ಕಾಂಗ್ರೆಸ್ ಪಕ್ಷದ ಯೋಜನೆ ನೋಡಿ ಮತ ಕೊಡಿ ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಮನವಿ ಮಾಡಿದ್ದಾರೆ.

ಬೆಳಗಾವಿ ಗ್ರಾಮೀಣ ವಿಧಾನ ಸಭಾ ಕ್ಷೇತ್ರದ ಬೆನಕನಹಳ್ಳಿಯಲ್ಲಿ ಗುರುವಾರ ಕಾಂಗ್ರೆಸ್ ಲೋಕಸಭಾ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಪರ ಉಚಗಾಂವ ಭಾಗದ ಕಾರ್ಯಕರ್ತರ ಹಾಗೂ ಮುಖಂಡರ ಸಭೆಯಲ್ಲಿ ಅವರು ಮಾತನಾಡುತ್ತಿದ್ದರು.

ನಾವು ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಮಾಡಿರುವ ಕೆಲಸಗಳನ್ನು ನೋಡಿ ನೀವೆಲ್ಲ ಕಳೆದ ವಿಧಾನಸಭೆ ಚುನಾವಣೆಯಲ್ಲಿ ಅಭೂತಪೂರ್ವ ಬೆಂಬಲ ನೀಡಿದ್ದೀರಿ. ಅದೇ ರೀತಿ ಲೋಕಸಭಾ ಚುನಾವಣೆಯಲ್ಲಿ ಸಹ ಬೆಂಬಲಿಸಿ. ಮೃಣಾಲ ಹೆಬ್ಬಾಳಕರ್ ನಿಮಗೆ ಹೊಸಬನಲ್ಲ. ನಿಮ್ಮ ಕಣ್ಣ ಮುಂದೆಯೇ ಬೆಳೆದ ಹುಡುಗ. ದಿನದ 24 ಗಂಟೆಯೂ ನಿಮ್ಮ ಕೈಗೆ ಸಿಗುವ ಹುಡುಗ. ನಿಮ್ಮೆಲ್ಲರ ಸೇವೆ ಮಾಡುವ, ಬೆಳಗಾವಿ ಲೋಕಸಭಾ ಕ್ಷೇತ್ರವನ್ನು ಅಭಿವೃದ್ಧಿ ಮಾಡುವ ಕನಸು ಹೊತ್ತು ಕಣಕ್ಕೆ ಇಳಿದಿದ್ದಾನೆ. ಲಕ್ಷ್ಮೀ ಹೆಬ್ಬಾಳಕರ್ ಕುಟುಂಬದ ಜೊತೆಗೆ ನಿಮಗೆ ಕಳೆದ 10 ವರ್ಷಗಳಿಂದಲೂ ನಿಕಟವಾದ ಸಂಬಂಧವಿದೆ. ಹಾಗಾಗಿ ಒಂದೇ ಕುಟುಂಬದಂತಿರುವ ನಾವೆಲ್ಲ ಸೇರಿ ಮುಂದಿನ ದಿನಗಳಲ್ಲೂ ಕೆಲಸ ಮಾಡೋಣ ಎಂದು ಚನ್ನರಾಜ ಹಟ್ಟಿಹೊಳಿ ಹೇಳಿದರು.

ಕಾಂಗ್ರೆಸ್ ಪಕ್ಷದ ಇತಿಹಾಸ ದೊಡ್ಡದಿದೆ. ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಪಕ್ಷ. ಬ್ರಿಟೀಶರನ್ನು ಭಾರತದಿಂದ ಓಡಿಸಿದ ನಂತರ ಶೂನ್ಯದಿಂದ ರಾಷ್ಟ್ರವನ್ನು ಕಟ್ಟಿದ ಪಕ್ಷ ಕಾಂಗ್ರೆಸ್. ಹಿಂದಿನಿಂದಲೂ ನುಡಿದಂತೆ ನಡೆದಿದೆ. ಅಭಿವೃದ್ಧಿಯಲ್ಲಿ ಬದ್ಧತೆ ತೋರಿಸಿದೆ. ಕಳೆದ ಚುನಾವಣೆಗೂ ಮುನ್ನ ಘೋಷಿಸಿದ್ದ ಪಂಚ ಗ್ಯಾರಂಟಿ ಯೋಜನೆಗಳನ್ನು ಅಧಿಕಾರಕ್ಕೆ ಬಂದ ತಕ್ಷಣ ಜಾರಿಗೊಳಿಸುವ ಮೂಲಕ ಜನರ ಜೀವನದಲ್ಲಿ ನೆಮ್ಮದಿ ಮೂಡಿಸಿದೆ. ಇದ–ರಿಂದಾಗಿ ಪಕ್ಷದ ಮೇಲಿನ ವಿಶ್ವಾಸ ಇನ್ನಷ್ಟು ಹೆಚ್ಚುವಂತಾಗಿದೆ. ಮುಂದಿನ ದಿನಗಳಲ್ಲಿ ಸಹ ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲೂ ಹಲವಾರು ಯೋಜನೆಗಳು



ಬರಲಿವೆ. ನಿಮ್ಮೆಲ್ಲರ ಸಹಕಾರ ಸದಾ ಇರಲಿದೆ ಎನ್ನುವ ವಿಶ್ವಾಸವಿದೆ ಎಂದು ಅವರು ಹೇಳಿದರು.

ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಮಾತನಾಡಿ, ನನ್ನ ತಾಯಿ ಲಕ್ಷ್ಮೀ ಹೆಬ್ಬಾಳಕರ್ ಹಾಗೂ ಮಾವ ಚನ್ನರಾಜ ಹಟ್ಟಿಹೊಳಿ ಅವರೇ ನನಗೆ ರಾಜ–ಕೀಯ ಗುರುಗಳು. ನಾನು ಅವರ ಮಾರ್ಗದರ್ಶನದಲ್ಲೇ ಸಮಾಜ ಸೇವೆ ಮತ್ತು ರಾಜಕೀಯವನ್ನು ಮಾಡುತ್ತಿರುವೆ. ಜನರ ಸೇವೆ ಮಾಡುವುದನ್ನು ಅವರು ನನಗೆ ಕಲಿಸಿಕೊಟ್ಟಿದ್ದಾರೆ. ನೀವೆಲ್ಲ ಕಳೆದ 10 ವರ್ಷದಲ್ಲಿ ನನಗೆ ಹಾಗೂ ನಮ್ಮ ಕುಟುಂಬಕ್ಕೆ ಅಪಾರ ಪ್ರೀತಿ, ವಿಶ್ವಾಸ ತೋರಿಸಿದ್ದೀರಿ. ನಾನು ಲೋಕಸಭಾ ಚುನಾವಣೆಯಲ್ಲಿ ಆಯ್ಕೆಯಾದರೆ ಇಡೀ ಕ್ಷೇತ್ರವನ್ನು ಮಾದರಿಯಾಗಿ ಅಭಿವೃದ್ಧಿಪಡಿಸುತ್ತೇನೆ. ಕ್ಷೇತ್ರದ ಯುವಕರಿಗೆ ಉದ್ಯೋಗ ಕಲ್ಪಿಸುವ ಯೋಜನೆಗಳನ್ನು ತರುತ್ತೇನೆ. ಹೆಚ್ಚು ಹೆಚ್ಚು ಉದ್ಯಮಗಳನ್ನು ಆರಂಭಿಸಲು ಸ್ಥಳೀಯ–ರಿಗೆ ಪ್ರೋತ್ಸಾಹ ಹಾಗೂ ಸಹಾಯ ನೀಡುತ್ತೇನೆ ಎಂದು ತಿಳಿಸಿದರು.

ಬೆಳಗಾವಿ ಲೋಕಸಭಾ ಕ್ಷೇತ್ರದ ಅಭಿವೃದ್ಧಿಗೆ ನನ್ನದೇ ಕನಸು ಹೊಂದಿದ್ದೇನೆ. ಕ್ಷೇತ್ರವನ್ನು ಸರ್ವಾಂಗೀಣವಾಗಿ ಅಭಿವೃದ್ಧಿಪಡಿಸಲಾಗುವುದು. ಕೃಷಿ, ಶಿಕ್ಷಣ, ಆರೋಗ್ಯ, ಔದ್ಯೋಗಿಕ ಯೋಜನೆಗಳನ್ನು ತರಲಾಗುವುದು. ಮೂರು ರಾಜ್ಯಗಳ ಸಂಗಮದಂತಿರುವ ಬೆಳಗಾವಿಯನ್ನು ಎಲ್ಲ ರೀತಿಯಲ್ಲೂ ಬೆಳೆಸಲು ಅವಕಾಶವಿದೆ. ಆ ದಿಸೆಯಲ್ಲಿ ಪ್ರಯತ್ನ ಮಾಡುತ್ತೇನೆ ಎಂದು ಮೃಣಾಲ ಹೆಬ್ಬಾಳಕರ್ ಭರವಸೆ ನೀಡಿದರು.

ಸಭೆಯಲ್ಲಿ ಉಚಗಾಂವ ಬ್ಲಾಕ್ ಕಾಂಗ್ರೆಸ್‌ನ ಅನೇಕ ಮುಖಂಡರು, ಕಾರ್ಯಕರ್ತರು ಮಾತನಾಡಿ, ಲಕ್ಷ್ಮೀ ಹೆಬ್ಬಾಳಕರ್ ಅವರನ್ನು ನಾವು ಮನೆ ಮಗಳು ಎಂದು ಒಪ್ಪಿಕೊಂಡು, ಸಹಕಾರ ನೀಡುತ್ತಿದ್ದೇವೆ. ಅವರಿಂದ ಕ್ಷೇತ್ರಕ್ಕೆ ಸಾಕಷ್ಟು ಕೆಲಸಗಳಾಗಿವೆ. ಅದೇ ರೀತಿಯಲ್ಲಿ ಮೃಣಾಲ ಹೆಬ್ಬಾಳಕರ್ ಅವರನ್ನು ಸಹ ಬೆಳೆಸುವುದು ನಮ್ಮ ಕರ್ತವ್ಯ. ನಾವೆಲ್ಲ ನಿಮ್ಮೊಂದಿಗಿದ್ದೇವೆ. ನಮ್ಮಿಂದ ಸಾಧ್ಯವಾದಷ್ಟು ಕ್ಷೇತ್ರದಲ್ಲೆಲ್ಲ ಅಡ್ಡಾಡಿ ಪ್ರಚಾರ ಮಾಡುತ್ತೇವೆ. ಗ್ರಾಮೀಣ ಕ್ಷೇತ್ರದಲ್ಲಿ ಕಳೆದ ವಿಧಾನಸಭೆ ಚುನಾವಣೆಗಿಂತ ಹೆಚ್ಚಿನ ಮತ ಬರುವಂತೆ ಮಾಡುತ್ತೇವೆ ಎಂದು ಅಭಯ ನೀಡಿದರು.

ನಮ್ಮ ಸುತ್ತಮುತ್ತ ಇರುವ ಬಹಳಷ್ಟು ಬೇರೆ ಪಕ್ಷಗಳ ಜನರು ಸಹ ಈ ಬಾರಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಅವರನ್ನೇ ಬೆಂಬಲಿಸುವುದಾಗಿ ಹೇಳುತ್ತಿದ್ದಾರೆ. ನಮಗೆ ಸ್ಥಳೀಯ ಅಭ್ಯರ್ಥಿ ಬೇಕು. ನಮ್ಮ ಸಂಸದರನ್ನು ಹುಡುಕಿಕೊಂಡು ಹೋಗುವಂತಹ ಸಂದರ್ಭ ಬರಬಾರದು. ನಮ್ಮ ಜಿಲ್ಲೆಗೆ ಅನ್ಯಾಯ ಮಾಡಿವರಿಗೆ ನಮ್ಮ ಬೆಂಬಲವಿಲ್ಲ ಎಂದು ಹೇಳುತ್ತಿದ್ದಾರೆ. ಹಾಗಾಗಿ ಗ್ರಾಮೀಣ ಕ್ಷೇತ್ರದಲ್ಲಿ ಕನಿಷ್ಟ 75 ಸಾವಿರ ಮತಗಳ ಲೀಡ್ ಕೊಡಿಸುತ್ತೇವೆ ಎಂದು ಸಭೆಯಲ್ಲಿ ಮುಖಂಡರು ಹೇಳಿದರು.

# ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಸಚಿವ ಸತೀಶ್ ಜಾರಕಿಹೊಳಿ ಕರೆ

ಬೆಳಗಾವಿ: ನಾವು ರಾಜ್ಯದಲ್ಲಿ ಚುನಾವಣೆ ಪೂರ್ವ ನೀಡಿದ ಭರವಸೆಗಳನ್ನು ಸಂಪೂರ್ಣವಾಗಿ ಜಾರಿಗೆ ತರುವ ಮೂಲಕ ನುಡಿದಂತೆ ನಡೆದಿದ್ದೇವೆ. ಆದ್ದರಿಂದ ಕೈ ಕಾರ್ಯಕರ್ತರು ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಮುಂದಾಗಬೇಕು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಕರೆ ನೀಡಿದರು.





ಚಿಕ್ಕೋಡಿ ಕಾಂಗ್ರೆಸ್ ಕಚೇರಿಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗೆ ಅಯ್ಕೆಯಾದ ಸದಸ್ಯರಿಗೆ ಸನ್ಮಾನಿಸಿ ಅವರು ಮಾತನಾಡಿ, ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷ ನುಡಿದಂತೆ ನಡೆಯುತ್ತಿದೆ. ಗ್ಯಾರಂಟಿ ಯೋಜನೆಗಳ ಬಗ್ಗೆ ಜನರಿಗೆ ಮಾಹಿತಿ ನೀಡಿ ಕಾಂಗ್ರೆಸ್ ಅಭ್ಯರ್ಥಿಯನ್ನು ಬೆಂಬಲಿಸುವಂತೆ ಮನವರಿಕೆ ಮಾಡಬೇಕೆಂದು ಕಾರ್ಯಕರ್ತರಿಗೆ ಮನವಿ ಮಾಡಿದರು.

ಚಿಕ್ಕೋಡಿ ಲೋಕಸಭಾ ವ್ಯಾಪ್ತಿಯಲ್ಲಿ ಕಾಂಗ್ರೆಸ್ ಪರ ಒಲವಿದ್ದು, ಮತದಾರರು ಕಾಂಗ್ರೆಸ್‌ಗೆ ಹೆಚ್ಚಿನ ಮತ ಚಲಾಯಿಸುವುದರ ಮೂಲಕ ಗೆಲುವಿಗೆ ಸಹಕರಿಸಬೇಕು. ಕಾಂಗ್ರೆಸ್ ಅಭ್ಯರ್ಥಿ ಯಾರೇ ಆದ–ರೂ, ಕಾಂಗ್ರೆಸ್ ಗೆಲುವಿಗೆ ಸನ್ನದ್ಧರಾಗಬೇಕು. ಚುನಾವಣೆಯಲ್ಲಿ ಕಾರ್ಯಕರ್ತರ ಪಾತ್ರ ಬಹಳ ಮುಖ್ಯ ಎಂದು ಅಭಿಪ್ರಾಯಪಟ್ಟರು.

ಅಲ್ಲದೇ ಐದು ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನ ಹಾಗೂ ಮೇಲ್ವಿಚಾರಣೆಗೆ ರಾಜ್ಯ ಮಟ್ಟದ ಕಾರ್ಯವ್ಯವಸ್ಥೆಯನ್ನು ಜಾರಿಗೆ ತರುವ ನಿಟ್ಟಿನಲ್ಲಿ ಮತ್ತು ಅಗತ್ಯ ನೀತಿ, ಸುಧಾರಣೆಗಳು, ಅನುಷ್ಠಾನದ ವಿಧಾನಗಳಲ್ಲಿ ಸರಳೀಕರಣ ತರಲು ಹಾಗೂ ತಳಮಟ್ಟದಲ್ಲಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಅನುಷ್ಠಾನ ಪ್ರಾಧಿಕಾರಗಳನ್ನು ಮತ್ತು ತಾಲೂಕು ಮಟ್ಟದಲ್ಲಿ ಅನುಷ್ಠಾನ ಸಮಿತಿಗಳನ್ನು ರಚಿಸಲಾಗಿದೆ. ಕಾಂಗ್ರೆಸ್ ಸರ್ಕಾರ ಜಾರಿಗೆ ತಂದ ಶಕ್ತಿ, ಗೃಹಜ್ಯೋತಿ, ಅನ್ನಭಾಗ್ಯ, ಗೃಹಲಕ್ಷ್ಮೀ ಮತ್ತು ಯುವನಿಧಿ ಯೋಜನೆಗಳ ಲಾಭ ಅರ್ಹ ಫಲಾನುಭವಿಗಳಿಗೆ ಸಿಗುವಂತೆ ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರಲು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗೆ ಸದಸ್ಯರು ಮುಂದಾಗಬೇಕು. ಅಲ್ಲದೇ ಕಾಂಗ್ರೆಸ್ ಸರ್ಕಾರದ ಸಾಧನೆಯನ್ನು ಜನರಿಗೆ ತಿಳಿಸಿ ಲೋಕಸಭಾ ಚುನಾವಣೆಯಲ್ಲಿ ಕೈ ಅಭ್ಯರ್ಥಿಗಳು ಗೆಲುವಿಗೆ ಶ್ರಮಿಸಿಬೇಕು ಎಂದರು.

ಈ ವೇಳೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗೆ ಸದಸ್ಯರಾಗಿ ಆಯ್ಕೆಯಾದ ಬಸವರಾಜ್ ನಾಯಿಕ, ಗೋಪಾಲ ದಳವಾಯಿ, ಪ್ರಭಾಕರ್ ಕೋರೆ, ಮಹಾದೇವ ಕೊಲ್ಲಾಪುರೆ, ರುದ್ರಯ್ಯ ಹಿರೇಮಠ ಅವರಿಗೆ ಸಚಿವ ಸತೀಶ್ ಜಾರಕಿಹೊಳಿ ಅವರು ಕಾಂಗ್ರೆಸ್ ಪಕ್ಷದ ಶಾಲು ಹೊದಿಸಿ ಸನ್ಮಾನ ಮಾಡಿದರು.ಈ ವೇಳೆ ಬುಡಾ ನೂತನ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ,ಲಕ್ಷ್ಮಣರಾವ್ ಚಿಂಗಳೆ, ವೀರಕುಮಾರ ಪಾಟೀಲ್, ನಿರ್ಮಲಾ ಪಾಟೀಲ ಸೇರಿದಂತೆ ಇತರರು ಇದ್ದರು.

# ಹಾಸ್ಯಕೂಟದ ತಿಂಗಳ ಕಾರ್ಯಕ್ರಮ ಪ್ರೊ. ಜಿ. ಕೆ. ಕುಲಕರ್ಣಿಯವರಿಂದ ಬಾಲ್ಯದ ಹಾಸ್ಯಪ್ರಸಂಗಗಳು



ಬೆಳಗಾವಿ: ನಗರದ ಹಾಸ್ಯಕೂಟ ಮತ್ತು ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಳಿ ಸಂಯುಕ್ತ ಆಶ್ರಯದಲ್ಲಿ ಇದೇ ದಿ. 13 ಶನಿವಾರದಂದು ಸಾಯಂಕಾಲ 4–30 ಕ್ಕೆ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ 'ಬಾಲ್ಯದ ಆಟ ಆ ಹುಡುಗಾಟ' ಎಂಬ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ಬಾಲ್ಯದಲ್ಲಿಯ ಹಾಸ್ಯ ಪ್ರಸಂಗಗಳನ್ನು ಹಂಚಿಕೊಳ್ಳುವ ಕಾರ್ಯಕ್ರಮ ಇದಾಗಿದ್ದು ಅಧ್ಯಕ್ಷತೆಯನ್ನು ಹಿರಿಯ ಪತ್ರಕರ್ತ, ಲೇಖಕ ಎಲ್. ಎಸ್. ಶಾಸ್ತ್ರಿಯವರು ವಹಿಸಲಿದ್ದಾರೆ. ಪ್ರಾಯೋಜಕತ್ವವನ್ನು ನಿವೃತ್ತ ಪ್ರಾಚಾರ್ಯ, ಲೇಖಕರಾದ ಪ್ರಾ. ವ್ಹಿ. ಎನ್. ಜೋಶಿಯವರು ವಹಿಸಿಕೊಂಡಿದ್ದಾರೆ. ಸಾಹಿತ್ಯ ಭವನದ ಗೌರವ ಕಾರ್ಯದರ್ಶಿಗಳಾದ ರಾಮಚಂದ್ರ ಕಟ್ಟಿ ಉಪಸ್ಥಿತಿತರಿರುತ್ತಾರೆ.

ಪ್ರಮುಖ ಭಾಷಣಕಾರರಾಗಿ ಪ್ರೊ. ಜಿ. ಕೆ. ಕುಲಕರ್ಣಿಯವರು ಆಗಮಿಸಲಿದ್ದು ಶ್ರೀಮತಿ ಭಾರತಿ ಮಠದ, ಶ್ರೀಮತಿ ರಾಜನಂದಾ ಗಾರ್ಗಿ, ಎಸ್. ವಿ. ದೀಕ್ಷೀತ, ಜಿ. ಎಸ್. ಸೋನಾರ ಬಾಲ್ಯದಲ್ಲಿಯ ಹಾಸ್ಯ ಪ್ರಸಂಗಗಳನ್ನು ಹಂಚಿಕೊಳ್ಳಲಿದ್ದಾರೆ.

ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ತಾವೆಲ್ಲರೂ ಭಾಗವಹಿಸಿ ನಕ್ಕು ನಕ್ಕು ಹಗುರಾಗುವಂತೆ ಹಾಸ್ಯಕೂಟ ಸಂಚಾಲಕ ಗುಂಡೇನಟ್ಟಿ ಮಧುಕರ ಕೇಳಿಕೊಂಡಿದ್ದಾರೆ.


# ಗವನಾಳ–ಸಂಕೇಶ್ವರದಲ್ಲಿ ತಲೆ ಎತ್ತಿದ ಅಂತರಾಷ್ಟ್ರೀಯ ಗುಣಮಟ್ಟದ 'ಕೆಎಲ್‌ಇ ಆಂಗ್ಲ ಮಾಧ್ಯಮ ಸಿಬಿಎಸ್‌ಸಿ ಸ್ಕೂಲ್'

ಬೆಳಗಾವಿ: ಗಡಿನಾಡು ಬೆಳಗಾವಿ ಜಿಲ್ಲೆ ಹುಕ್ಕೇರಿ ತಾಲೂಕಿನ ಸಂಕೇಶ್ವರದಲ್ಲಿ ಕೆ–ಎಲ್‌ಇ ಸಂಸ್ಥೆಯು ಮತ್ತೊಂದು ಮೈಲ್ಲುಗಲ್ಲಿಗೆ ಸಾಕ್ಷಿಯಾಗಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಭವಿಷ್ಯವನ್ನು ರೂಪಿಸುವ ನಿಟ್ಟಿನಲ್ಲಿ ಕಾರ್ಯಾಧ್ಯಕ್ಷರಾದ ಡಾ. ಪ್ರಭಾಕರಕೋರೆ ನೇತೃತ್ವದಲ್ಲಿ ಹಾಗೂ ಆಡಳಿತ ಮಂಡಳಿಯವರ ಇಚ್ಛಾ ಶಕ್ತಿಯಂತೆ ಕೆಎಲ್‌ಇ ಸಿಬಿಎಸ್‌ಸಿ ಆಂಗ್ಲ ಮಾಧ್ಯಮ ಶಾಲೆಯು ಶನಿವಾರ 13 ಏಪ್ರಿಲ್ 2024 ರಂದು ಮುಂಜಾನೆ 10.00 ಗಂಟೆಗೆ ಉದ್ಘಾಟನೆಗೊಳ್ಳಲಿದೆ. ಇನ್ಫೋಶಿಸ್ ಮುಖ್ಯಸ್ಥೆ ಪದ್ಮಭೂಷಣ ಡಾ.ಸುಧಾ ಮೂರ್ತಿಯವರು ಈ ನೂತನ ಕಟ್ಟಡವನ್ನು ಉದ್ಘಾಟಿಸಲಿದ್ದಾರೆ.

1916 ರಲ್ಲಿ ಸ್ಥಾಪನೆಗೊಂಡ ಕೆಎಲ್‌ಇ ಸಂಸ್ಥೆಯು 108 ವರ್ಷಗಳ ಸುದೀರ್ಘ ಚ–ರಿತ್ರೆಯಲ್ಲಿ ಶೈಕ್ಷಣಿಕ, ಆರೋಗ್ಯ ಹಾಗೂ ಸಂಶೋಧನಾ ಕ್ಷೇತ್ರಗಳಲ್ಲಿ ಜಾಗತಿಕ ಮನ್ನಣೆಗೆ ಪಾತ್ರವಾಗಿರುವುದು ಎಲ್ಲರಿಗೂ ಗೊತ್ತಿರುವ ಸಂಗತಿ. ಪ್ರಸ್ತುತ ಸಂಸ್ಥೆಯಲ್ಲಿ 1,38,000 ವಿದ್ಯಾರ್ಥಿಗಳು ಅಭ್ಯಾಸ ಮಾಡುತ್ತಿದ್ದು, 18,000 ಸಿಬ್ಬಂದಿ ವರ್ಗದವರು ಸೇವೆ ಸಲ್ಲಿಸುತ್ತಿದ್ದಾರೆ. ವರ್ಷದಿಂದ ವರ್ಷಕ್ಕೆ ಸಂಸ್ಥೆಯು ಶಿಖರೋನ್ನತಿ ಹೊಂದುತ್ತಿರುವುದು ಅದರರ ಚನಾತ್ಮಕ ಹಾಗೂ ಕ್ರಿಯಾತ್ಮಕ ಶಕ್ತಿಗೆ ನಿದರ್ಶನವೆನಿಸಿದೆ.

ಶಿಕ್ಷಣದ ಇಂದಿನ ಎಲ್ಲ ಬೇಕು–ಬೇಡಿಕೆಗಳನ್ನು ಪೂರೈಸಿರುವ ಸಂಸ್ಥೆ ಅಂತರಾಷ್ಟ್ರೀಯ ಮಟ್ಟದ ಗುಣಾತ್ಮಕತೆಯನ್ನು ನೀಡುತ್ತಾ ಬಂದಿದೆ. ಶಿಶುವಿಹಾರದಿಂದ ಸ್ನಾತಕೋತ್ತರವರೆಗೆ ಮೌಲಿಕ ಶಿಕ್ಷಣವನ್ನು ನೀಡಿಅಗಾಧವಾಗಿ ಬೆಳೆದು ನಿಂತಿದೆ.

ಅಸಂಖ್ಯ ಪ್ರತಿಭಾವಂತರನ್ನು ರೂಪಿಸಿದೆ. ರಾಷ್ಟ್ರಕ್ಕೆ ಅದ್ವಿತೀಯ ವೈದ್ಯರನ್ನು, ಅಭಿಯಂತರರನ್ನು, ಸಾಹಿತಿಗಳನ್ನು, ಉದ್ಯಮಿಪತಿಗಳನ್ನು, ಶಿಕ್ಷಕರನ್ನು ನೀಡಿದಖ್ಯಾತಿ ಕೆಎಲ್‌ಇ ಸಂಸ್ಥೆಯದು. ಸಂಸ್ಥೆಯ ಬಹುಸಂಖ್ಯೆಯ ಶಿಕ್ಷಣ ಸಂಸ್ಥೆಗಳು ಹಾಗೂ ಆರೋಗ್ಯ ಸೇವಾ ಕೇಂದ್ರಗಳು ಗ್ರಾಮೀಣ ಭಾಗದಲ್ಲಿಯೇ ಇರುವುದನ್ನು ಗಮನಿಸಬಹುದು. ರೈತರ, ಕಾರ್ಮಿಕ ವರ್ಗದ ಮಕ್ಕಳ ಶೈಕ್ಷಣಿಕ ವಿಕಾಸಕ್ಕಾಗಿ ಉನ್ನತದರ್ಜೆಯ ಶಿಕ್ಷಣ ಕೇಂದ್ರಗಳನ್ನು ಸ್ಥಾಪಿಸಿ ಸಮಾಜಕ್ಕೊಂದು ಮುನ್ನುಡಿಯನ್ನು



ಬರೆದಿದೆ. ಈ ದೆಸೆಯಲ್ಲಿಗ್ರಾಮೀಣ ಭಾಗದ ವಿದ್ಯಾರ್ಥಿಗಳನ್ನೇ ಕೇಂದ್ರವಾಗಿಟ್ಟುಕೊಂಡು ಅಂಕಲಿ, ನಿಪ್ಪಾಣಿ,ಚಿಕ್ಕೋಡಿ, ಹಾವೇರಿ, ಸವದತ್ತಿ, ಅಥಣಿ, ಗದಗ, ಗೋಕಾಕ, ಮಾಲೂರ, ಗಳತಗಾ, ಕೇರೂರ, ಕೊಟಗೊಂಡ ಹುನಶಿ ಪ್ರದೇಶಗಳಲ್ಲಿಯೇ ಕನ್ನಡ ಮತ್ತುಆಂಗ್ಲಮಾಧ್ಯಮ ಶಾಲೆಗಳನ್ನು ಹುಟ್ಟುಹಾಕಿಗುಣಮಟ್ಟದ ಶಿಕ್ಷಣವನ್ನು ನೀಡುತ್ತಾ ಬಂದಿದೆ. ಇಲ್ಲೆಲ್ಲಕೆಎಲ್‌ಇ ಶಾಲೆಯ ಕಟ್ಟಡಗಳನ್ನು ನೋಡುವುದು ಒಂದು ವಿಸ್ಮಯವೇ ಸರಿ. ಅಂತರಾಷ್ಟ್ರೀಯ ಮಟ್ಟದ–ಎಲ್ಲ ಸೌಲಭ್ಯಗಳನ್ನು ಒಳಗೊಂಡಿರುವ ಕನ್ನಡ ಮತ್ತುಆಂಗ್ಲ ಮಾಧ್ಯಮ ಶಾಲೆಗಳು ಕಾಯರ್ಾಧ್ಯಕ್ಷರಾದಡಾ.ಪ್ರಭಾಕರಕೋರೆ ಹಾಗೂ ಆಡಳಿತ ಮಂಡಳಿಯ ಸದಸ್ಯರ ಇಚ್ಛಾ ಶಕ್ತಿಯಿಂದ ತಲೆಎತ್ತಿ ನಿಂತಿವೆ.

ಪ್ರಸ್ತುತ ಕೆಎಲ್‌ಇ ಸಂಸ್ಥೆಯು ಕರ್ನಾಟಕ, ಮಹಾರಾಷ್ಟ್ರ, ದೆಹಲಿ ಮೊದಲುಗೊಂಡು 15 ಸಿಬಿಎಸ್‌ಇ ಶಾಲೆಗಳನ್ನು, 7 ರಾಜ್ಯ ಪಠ್ಯಕ್ರಮದಆಂಗ್ಲಮಾಧ್ಯಮ ಶಾಲೆಗಳನ್ನು ಮುನ್ನಡೆಸುತ್ತಿದೆ. ಈ ಶಾಲೆಗಳಲ್ಲಿ ಒಟ್ಟು 21,000ಕ್ಕೂ ಅಧಿಕ ವಿದ್ಯಾರ್ಥಿಗಳು ಶಾಲಾ ಶಿಕ್ಷಣವನ್ನು ಪಡೆಯುತ್ತಿರುವುದು ಹೆಮ್ಮೆಯ ಸಂಗತಿ.

ನೂತನಕಟ್ಟಡದ ವೈಶಿಷ್ಟ್ಯತೆಗಳು: ಸದ್ಯ ಉದ್ಘಾಟನೆಗೊಂಡಿರುವ ಗವನಾಳ–ಸಂಕೇಶ್ವರದ ಕೆಎಲ್‌ಇ ಸ್ಕೂಲ್2023–24ರಲ್ಲಿ ಪ್ರಾರಂಭಗೊಂಡಿದ್ದು4ಎಕರೆ ನಿವೇಶನದಲ್ಲಿ 1,25,000 ಚ.ಅಡಿ ವಿಸ್ತೀರ್ಣದಲ್ಲಿ ವ್ಯಾಪಿಸಿಕೊಂಡಿರುವ ಶಾಲೆಯಕಟ್ಟಡವನ್ನು 18ಕೋಟಿರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿದೆ. ಪ್ರಸ್ತುತಶಾಲೆಗೆ ದಾನಿಗಳಾದ ಶ್ರೀಮತಿ ಮಾಲುತಾಯಿ ಶಿವಪುತ್ರ ಶಿರಕೋಳಿಯವರ ಹೆಸರನ್ನು ನಾಮಕರಣ ಮಾಡಲಾಗುತ್ತಿದೆ.

ಅತ್ಯಂತ ವೈವಿಧ್ಯಪೂರ್ಣವಾಗಿರುವ ಈ ಶಾಲಾ ಕಟ್ಟಡದಲ್ಲಿ ವಿಶೇಷವಾದ ಹೈಟೆಕ್ ವರ್ಗಕೋಣೆಗಳಿವೆ.

ಅತ್ಯಾಧುನಿಕವಾದ ವಿಜ್ಞಾನ, ಕಂಪ್ಯೂಟ–ರ್ ಪ್ರಯೋಗಾಲಯಗಳನ್ನು, ಡಿಜಿಟಲ್‌ಗ್ರಂಥಾಲಯ, ಕ್ರೀಡಾ ವಿಭಾಗ, ಸಂಗೀತತರಬೇತಿ ಹಾಗೂ ಭವ್ಯವಾದಉ–ದ್ಯಾನವನವನ್ನು ಹೊಂದಿದೆ. ಒಳಾಂಗಣದಲ್ಲಿ ಹಸಿರುಮನೆಯನ್ನು ನಿರ್ಮಿಸಲಾಗಿದ್ದು ವಿದ್ಯಾರ್ಥಿಗಳ ಮನಸ್ಸಿಗೆ ಆಹ್ಲಾದಕರ ವಾತಾವರಣವನ್ನುಂಟುಮಾಡಿದೆ.

ಸುತ್ತಮುತ್ತಲಿನ ಗ್ರಾಮೀಣ ಭಾಗದಿಂದ ಬರುವ ವಿದ್ಯಾರ್ಥಿಗಳಿಗಾಗಿ ಬಸ್‌ನ ಸೌಲಭ್ಯವನ್ನುಒದಗಿಸಲಾಗಿದೆ. ಆವರಣದಲ್ಲಿ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗಿದ್ದು, ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯ–ರಿಗೆ ಪ್ರತ್ಯೇಕವಾದ ಶೌಚಾಲಯಗಳನ್ನು ನಿರ್ಮಿಸಲಾಗಿದೆ.

ಪ್ರಸ್ತುತ ಶಾಲೆಯಲ್ಲಿ ನರ್ಸರಿಯಿಂದ7ನೇ ತರಗತಿಯವರೆಗೆ 300ಕ್ಕೂ ಅಧಿಕ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, 35ಕ್ಕೂ ಅಧಿಕ ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಒಂದುತಾಲೂಕು ಪ್ರದೇಶದಲ್ಲಿ ಅಂತರಾಷ್ಟ್ರೀಯ ಮಟ್ಟದ ಶಾಲೆಯನ್ನು ನಿರ್ಮಿಸಿರುವುದು ಡಾ. ಕೋರೆಯವರ ಇಚ್ಛಾಶಕ್ತಿಯ ಪ್ರತೀಕವೆನ್ನಲೇಬೇಕು.

ಬೆಂಗಳೂರು, ಮುಂಬಯಿ, ದೆಹಲಿಯ ಸುಪ್ರಸಿದ್ಧ ಅಂತರಾಷ್ಟ್ರೀಯ ಶಾಲೆಗಳಲ್ಲಿರುವ ಕಲಿಕಾ ವಿಧಾನಗಳು, ಬೋಧನೆಯ ಕೌಶಲಗಳನ್ನು ಚಿಕ್ಕೋಡಿಯ ಈ ಕೆಎಲ್‌ಇಆಂಗ್ಲ ಶಾಲೆಯಲ್ಲಿಯೂ ವಿದ್ಯಾರ್ಥಿಗಳಿಗೆ ಅತ್ಯಂತ ಸರಳವಾಗಿ ಲಭ್ಯವಾಗುವಂತೆ ನೋಡಿಕೊಂಡಿರುವುದುಕೆಎಲ್‌ಇ ಸಂಸ್ಥೆಯಅಗಾಧತೆಗೆ ಸಾಕ್ಷಿಯಾಗಿ ನಿಂತಿದೆ. ಗ್ರಾಮೀಣ ಭಾಗದರೈತ ಮಕ್ಕಳು ಗುಣಾತ್ಮಕವಾದ ಶಿಕ್ಷಣ ಪಡೆದು ಭವಿಷ್ಯದಲ್ಲಿತೇರ್ಗಡೆಹೊಂದಿ, ಮುಂದಿನ ತರಗತಿಗಳ ಮೂಲಕ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿ ಉನ್ನತ ಹುದ್ದೆಗಳನ್ನು ಅಲಂಕರಿಸಲೆಂಬ ಸಪ್ತರ್ಷಿಗಳ ಕನಸ್ಸನ್ನುಡಾ. ಪ್ರಭಾಕರಕೋರೆತಂಡದವರು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ. ಕೆಎಲ್‌ಇ ಸಂಸ್ಥೆಯ ಈ ರೀತಿಯ ಶೈಕ್ಷಣಿಕಅಭಿಯಾನ ಸಮಾಜಮುಖಿಯಾಗಿ ಮತ್ತಷ್ಟು ವಿಸ್ತ–ರಿಸಲೆಂದು ಹಾರೈಸೋಣ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089